ನಿಮ್ಮ ನಂಬಿಕೆಯ ಧ್ವನಿ
# ಧೈರ್ಯದ ದಾರಿ
DAIRYADA DAARI NEWS PAPER
EMAIL : dairyadadaari@gmail.com ಸಂಪುಟ: 01 ಸಂಚಿಕೆ: 18
ಬೆಲೆ ರೂ : 2.00
ರಾಯಚೂರು
ಪುಟ: 4
ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ
Cell : 6360866626, 9036887793
KANNADA DAILY NEWS PAPER
ಕನ್ನಡ ದಿನಪತ್ರಿಕೆ
DAIRYADA DAARI
RNI NO: KNKAN/25/A2795
ಮಂಗಳವಾರ: 23-12-2025

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
6360866626

# ಗ್ಯಾರಂಟಿ ಯೋಜನೆಗಳಿಂದ ಜನತೆಗೆ ಅನುಕೂಲ: ಎಸ್.ಆರ್.ಮೆಹರೋಜ್





ಧೈರ್ಯದ ದಾರಿ

**ರಾಯಚೂರು ಡಿ.22:**ರಾಜ್ಯ ಸರ್ಕಾರದ ಗೃಹ ಲಕ್ಷ್ಮಿ, ಯುವನಿಧಿ, ಅನ್ನಭಾಗ್ಯ, ಗೃಹ ಜ್ಯೋತಿ ಹಾಗೂ ಶಕ್ತಿ ಯೋಜನೆಗಳು ಸಮಾಜದಲ್ಲಿನ ಎಲ್ಲ ವರ್ಗದ ಜನರ ಆರ್ಥಿಕ ಸಬಲತೆಗೆ ಕಾರಣವಾಗಿವೆ ಎಂದು ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಎಸ್.ಆರ್. ಮೆಹರೋಜ್ ಖಾನ್ ಅವರು ಹೇಳಿದರು.

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ, ಜಿಲ್ಲಾ ಕೌಶಲ್ಯ ಮಿಷನ್ ಹಾಗೂ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ, ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಕಲಬುರಗಿ ವಿಭಾಗದ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ, ರಾಯಚೂರಿನ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಇವರ ಸಂಯುಕ್ತಾಶ್ರದಲ್ಲಿ ಯುನನಿಧಿ ಯೋಜನೆ ಸೇರಿದಂತೆ ಐದು ಗ್ಯಾರಂಟಿ ಯೋಜನೆಗಳು ಸಮಾಜದಲ್ಲಿ ಉಂಟು ಮಾಡಿರುವ ಧನಾತ್ಮಕ ಪರಿಣಾಮಗಳ ಕುರಿತು ಡಿಸೆಂಬರ್ 22ರ ಸೋಮವಾರ ನಗರದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಆಡಳಿತ ಭವನದಲ್ಲಿ ನಡೆದ ವಿದ್ಯಾರ್ಥಿಗಳೊಂದಿಗೆ ಸಂವಾದ ಕಾರ್ಯಕ್ರಮದಲ್ಲಿ ಭಾಗಿಯಾಗಿ ಅವರು ಮಾತನಾಡಿದರು. ರಾಜ್ಯ ಸರ್ಕಾರವು ಬಡಜನರ ಕಲ್ಯಾಣಕ್ಕಾಗಿ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿ ಗಾಂಧೀಜಿ, ಡಾ.ಬಿ.ಆರ್.ಅಂಬೇಡ್ಕರ್ ಅವರ ಕನಸುಗಳನ್ನು ಸಾಕಾರಗೊಳಿಸುವಲ್ಲಿ ಯಶಸ್ವಿಯಾಗಿದೆ. ಸಮಾಜದಲ್ಲಿನ ಯುವ ಸಮೂಹ ಸೇರಿದಂತೆ ಎಲ್ಲರಿಗೂ ಗ್ಯಾರಂಟಿ ಯೋಜನೆಗಳು ಬಹಳ ಅನುಕೂಲವಾಗಿವೆ. ಈ ಯೋಜನೆಗಳಿಂದ ರಾಜ್ಯದ ಜನರ ಜೀವನಮಟ್ಟ ಸುಧಾರಣೆಯಾಗಿದೆ. ಮುಖ್ಯವಾಗಿ ಮಹಿಳೆಯರು ಆರ್ಥಿಕವಾಗಿ ಸಬಲರಾಗಿದ್ದಾರೆ. ಬಡಜನತೆಗೆ ಈ ಯೋಜನೆಗಳು ಬಹಳ ಸಹಕಾರಿಯಾಗಿವೆ ಎಂದರು.

ವಿದ್ಯಾರ್ಥಿಗಳೊಂದಿಗೆ ಸಂವಾದ: ಎಸ್.ಆರ್.ಮೆಹರೋಜ್ ಖಾನ್ ಅವರು ಇದೆ ವೇಳೆ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು. ಯುವನಿಧಿ ಯೋಜನೆಯ ಸಹಾಯಧನದಿಂದ ಕಾನೂನು ಪದವಿ ಓದುತ್ತಿದ್ದು, ಇದೆ ರೀತಿ ಮುಂದಿನ ದಿನಗಳಲ್ಲಿ ವಿದ್ಯಾರ್ಥಿಗಳಿಗೆ ಹೆಚ್ಚಿನ ಮಟ್ಟದಲ್ಲಿ ಸೌಲಭ್ಯ ಒದಗಿಸಬೇಕೆಂದು ಕಾನೂನು ಪದವಿ ವಿದ್ಯಾರ್ಥಿ ಶಿವಪ್ಪ ಸಲಹೆ ಮಾಡಿದರು. ಗೃಹಲಕ್ಷ್ಮಿ ಯೋಜನೆಯ ಸಹಾಯಧನವು ಸಕಾಲಕ್ಕೆ ಸಿಗುವ ಹಾಗೆ ನೋಡಿಕೊಳ್ಳಬೇಕು ಎಂದು ಕೃಷಿ 2ನೇಪುಟಕ್ಕೆ►

## ಸಿರಿಧಾನ್ಯಗಳ ಜಾಗೃತಿ ಜಾಥಾಕ್ಕೆ ಸಚಿವ ಎನ್.ಎಸ್.ಬಿ ಚಾಲನೆ



**ರಾಯಚೂರು,ಡಿ.22:** ಇಲ್ಲಿನ ಕೃಷಿ ಇಲಾಖೆಯಿಂದ ಸಿರಿಧಾನ್ಯ, ಸಾವಯವ ಉತ್ಪನ್ನಗಳ ಕುರಿತು ಗ್ರಾಹಕರಿಗೆ ಜಾಗೃತಿ ಮೂಡಿಸಲು ಸಿರಿಧಾನ್ಯಗಳ ನಡಿಗೆ ರೋಡ್ ಶೋ ಕಾರ್ಯಕ್ರಮಕ್ಕೆ ಡಿಸೆಂಬರ್ 22ರಂದು ನಗರದ ಜಿಲ್ಲಾ ಪಂಚಾಯತ್ ಆವರಣದಲ್ಲಿ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಹಾಗೂ ಕರ್ನಾಟಕ ವಿಧಾನ ಪರಿಷತ್ತು ಸಭಾ ನಾಯಕರಾದ ಎನ್.ಎಸ್.ಬೋಸರಾಜು ಅವರು ಬಣ್ಣಬಣ್ಣದ ಬಲೂನ್ ಹಾರಿಬಿಡುವ ಮೂಲಕ ಚಾಲನೆ ನೀಡಿದರು.

ಜಾಗೃತಿ ನಡಿಗೆಯು ಜಿಲ್ಲಾ ಪಂಚಾಯತ್ ಕಚೇರಿ ಆವರಣದಿಂದ ಆರಂಭವಾಗಿ, ಜಿಲ್ಲಾ ನ್ಯಾಯಾಲಯಗಳ ಸಂಕೀರ್ಣ, ಜಂಟಿ ಕೃಷಿ ನಿರ್ದೇಶಕರ ಕಚೇರಿ, ಬಸವೇಶ್ವರ ವೃತ್ತ ಮಾರ್ಗವಾಗಿ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ರಾಯಚೂರು ಆವರಣದವರೆಗೆ ಸಾಗಿತು. 2ನೇಪುಟಕ್ಕೆ►

## ಪೋಲಿಯೋ ಮುಕ್ತ ಭಾರತ-ಪಲ್ಸ್ ಪೋಲಿಯೋ ಅಭಿಯಾನಕ್ಕೆ ಚಾಲನೆ ನೀಡಿದ ಶಾಸಕ ಹಂಪಯ್ಯನಾಯಕ



ಧೈರ್ಯದ ದಾರಿ

**ಮಾನ್ವಿ,ಡಿ.22–** ಪಟ್ಟಣದ ತಾಯಿ ಮತ್ತು ಮಕ್ಕಳ ಆಸ್ಪತ್ರೆ ಸಭಾಂಗಣದಲ್ಲಿ ಆರೋಗ್ಯ ಇಲಾಖೆ ವತಿಯಿಂದ ನಡೆದ ಪೋಲಿಯೋ ಮುಕ್ತ ಭಾರತ-ಪಲ್ಸ್ ಪೋಲಿಯೋ ಅಭಿಯಾನ ಅಂಗವಾಗಿ ಶಾಸಕ ಹಂಪಯ್ಯನಾಯಕ ಮಗುವಿಗೆ ಪೋಲಿಯೋ ಹನಿಗಳನ್ನು ಹಾಕುವ ಮೂಲಕ -ಪಲ್ಸ್ ಪೋಲಿಯೋ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿ ತಾಲೂಕಿನಾದ್ಯಂತ ಆರೋಗ್ಯ ಇಲಾಖೆಯಿಂದ ಪಲ್ಸ್ ಪೋಲಿಯೋ ಲಸಿಕೆಯನ್ನು ನೀಡುವುದಕ್ಕೆ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ ನಮ್ಮ ದೇಶದಲ್ಲಿ ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಪ್ರತಿವರ್ಷ 0-5 ವರ್ಷದ ಮಕ್ಕಳಿಗೆ ಉಚಿತವಾಗಿ ಪೋಲಿಯೋ ಹನಿಗಳನ್ನು ನೀಡುವ ಮೂಲಕ ದೇಶವನ್ನು ಪೋಲಿಯೋ ಮುಕ್ತವಾಗಿಸಿದ್ದರೆ ಅದ್ದರು ಕೂಡ ಪೋಲಿಯೋ ದಿಂದ ಮಕ್ಕಳಿಗೆ ಅಂಗವೈಕಲ್ಯ ಉಂಟಾಗದಂತೆ ಮುಂಜಾಗ್ರತೆಯಾಗಿ ಪೋಲಿಯೋ ಲಸಿಕೆಯನ್ನು ಹಾಕಲಾಗುತ್ತಿದೆ ಮನೆಗೆ ಮನೆಗೆ ಭೇಟಿ ನೀಡಿ ಆರೋಗ್ಯ ಇಲಾಖೆ ಸಿಬ್ಬಂದಿಗಳು ಆಶಾ ಕಾರ್ಯಕರ್ತರು ಪೋಲಿಯೋ ಲಸಿಕೆ ಹಾಕುತ್ತಿದ್ದಾರೆ ಪಾಲಕರು ಅಗತ್ಯ ಸಹಕಾರ ನೀಡುವ ಮೂಲಕ ತಮ್ಮ ಮಕ್ಕಳಿಗೆ ಪೋಲಿಯೋ 2ನೇಪುಟಕ್ಕೆ►

## ರಾಯಚೂರು ಉತ್ಸವಕ್ಕೆ ಸಿದ್ಧತೆ ಈ ಕ್ಷಣದಿಂದಲೇ ಆರಂಭವಾಗಲಿ; ಜಿಲ್ಲಾಧಿಕಾರಿ ನಿತೀಶ್ ಕೆ. ನಿರ್ದೇಶನ



**ರಾಯಚೂರು,ಡಿ.22:** ಬಹುವರ್ಷಗಳ ನಂತರ ಜಿಲ್ಲೆಯಲ್ಲಿ 2026ರ ಜನವರಿ 29, 30 ಹಾಗೂ 31ರಂದು ಮೂರು ದಿನಗಳ ಕಾಲ ರಾಯಚೂರು ಉತ್ಸವ ನಿಗದಿಯಾಗಿದೆ. ಈ ಉತ್ಸವ ರಾಯಚೂರು ನಗರಕ್ಕಷ್ಟೇ ಸೀಮಿತವಲ್ಲ; ಇಡೀ ಜಿಲ್ಲೆಯ ಉತ್ಸವವಾಗಿದೆ. ಜಿಲ್ಲೆಯಲ್ಲಿನ ಎಲ್ಲ ಅಧಿಕಾರಿಗಳು ಮತ್ತು ಸಿಬ್ಬಂದಿ ಒಗ್ಗೂಡಿ ಮಾಡಬೇಕಾದ ಕಾರ್ಯಕ್ರಮವಾಗಿದ್ದು, ಸಿದ್ಧತಾ ಕಾರ್ಯವು ಇಂದಿನಿಂದಲೇ, ಈ ಕ್ಷಣದಿಂದಲೇ ಆರಂಭವಾಗಬೇಕು ಎಂದು ರಾಯಚೂರು ಉತ್ಸವದ ಸ್ವಾಗತ ಮತ್ತು ಶಿಷ್ಟಾಚಾರ ಸಮಿತಿಯ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಡಿಸೆಂಬರ್ 22ರ ಸೋಮವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ರಾಯಚೂರು ಉತ್ಸವ-26ರ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಉತ್ಸವದ ಎಲ್ಲ ಕೆಲಸ-ಕಾರ್ಯಗಳ ಸುಗಮವಾಗಿ ನಡೆಯಲು ಅನುಕೂಲವಾಗುವಂತೆ ಉತ್ಸವದ ಮೊದಲನೇ ಸಭೆಯ ಪೂರ್ವದಲ್ಲಿಯೇ ನಾವು ಸಮಿತಿಗಳನ್ನು ರಚಿಸಿದ್ದೇವೆ. ಆಯಾ ಸಮಿತಿಗಳು ನಿರ್ವಹಿಸಬೇಕಾದ ಕಾರ್ಯಗಳನ್ನು ಪಟ್ಟಿ ಮಾಡಿದ್ದೇವೆ. ಅದರಂತೆ ಎಲ್ಲ ಕೆಲಸ ಕಾರ್ಯಗಳು ಅಚ್ಚುಕಟ್ಟಾಗಿ ನಡೆಯಬೇಕು ಎಂದು ಸೂಚನೆ ನೀಡಿದರು.

ಉತ್ಸವ ಮೂರು ದಿನಗಳ ಕಾಲ ಅದ್ದೂರಿ ಆಗಿ ನಡೆಯಬೇಕು. ರಾಯಚೂರು ಸಿಟಿ ಜೊತೆಗೆ ದೇವದುರ್ಗ, ಸಿರವಾರ, ಅರಕೇರಾ, ಲಿಂಗಸಗೂರು, ಮಸ್ಕಿ, ಸಿಂಧನೂರ, ಮಾನವಿ ಸೇರಿದಂತೆ ಎಲ್ಲ ತಾಲೂಕಿನ ಜನತೆ ಉತ್ಸವದಲ್ಲಿ ಭಾಗಿಯಾಗಬೇಕು. ಇದಕ್ಕಾಗಿ ಈಗಿನಿಂದಲೇ ಬಸ್ ಗಳ ವ್ಯವಸ್ಥೆಗೆ ಯೋಜನೆ ರೂಪಿಸಬೇಕು. ಮುಖ್ಯವಾಗಿ ಪೊಲೀಸ್ ಇಲಾಖೆಯು ಈಗಿನಿಂದಲೇ ಜಾಗೃತಿ ವಹಿಸಿ ಜನವರಿ 29, 30 ಹಾಗೂ 31ರಂದು ಅದ್ದೂರಿಯಾಗಿ ಜರುಗುವ ಕಾರ್ಯಕ್ರಮದಲ್ಲಿ ಯಾವುದೇ ರೀತಿಯ ಅವಘಡಗಳಾಗಿ 2ನೇಪುಟಕ್ಕೆ►

# ಮಲ್ಲಿಕಾರ್ಜುನ ಖರ್ಗೆ ನೆಪ ಮಾತ್ರಕ್ಕೆ ಎಐಸಿಸಿ ಅಧ್ಯಕ್ಷ..? : 'ಕೈ'ಕಮಾಂಡ್ ಗೊಂದಲ

**ಬೆಂಗಳೂರು, ಡಿ.22:** ರಾಜ್ಯ ರಾಜಕೀಯದಲ್ಲಿನ ಗೊಂದಲಗಳನ್ನು ಬಗೆ ಹರಿಸುವ ಬದಲಾಗಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಹೇಳಿಕೆಗಳು ರಾಷ್ಟ್ರಮಟ್ಟದ ಕಾಂಗ್ರೆಸ್ಸಿನಲ್ಲಿಯೂ ಗೊಂದಲಗಳಿವೆಯೇ ಎಂಬ ಅನುಮಾನ ಮೂಡುವಂತೆ ಮಾಡಿದೆ.

ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಮತ್ತು ಮಲ್ಲಿಕಾರ್ಜುನ ಖರ್ಗೆ ಅವರ ನಡುವೆ ಹೊಂದಾಣಿಕೆಯ ಕೊರತೆ ಇದೆಯೇ ಎಂಬ ಚರ್ಚೆಯನ್ನು ಹುಟ್ಟು ಹಾಕಿದೆ.ಹೈಕಮಾಂಡ್ ನಾಯಕರು ಯಾರು ಎಂಬ ಪ್ರಶ್ನೆಗಳು ಕಾಂಗ್ರೆಸ್‌ನಲ್ಲಿ ಉದ್ಭವಿಸಿವೆ. ನಾಯಕತ್ವದ ಗೊಂದಲ ಸೃಷ್ಟಿಸಿರುವವರು ರಾಜ್ಯದ ನಾಯಕರು, ಅವರೇ ಬಗೆಹರಿಸಿಕೊಳ್ಳಬೇಕು. ಎಲ್ಲದಕ್ಕೂ ಹೈಕಮಾಂಡ್ ನತ್ತ ಮುಖ ಮಾಡಬಾರದು ಎಂದು ನಿನ್ನೆ ಮಲ್ಲಿಕಾರ್ಜುನ ಖರ್ಗೆ ಹೇಳಿದ್ದರು. ಇದಕ್ಕೆ ಕಾಂಗ್ರೆಸ್ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿದೆ. ಬಹಳಷ್ಟು ಸಚಿವರು ಹೈಕಮಾಂಡ್ ಮಧ್ಯ ಪ್ರವೇಶ ಮಾಡಿ ನಾಯಕತ್ವದ ಗೊಂದಲಗಳನ್ನು ಇತ್ಯರ್ಥ ಪಡಿಸಬೇಕು ಎಂದು ಹೇಳುತ್ತಿದ್ದರು. ಈಗ ಮಲ್ಲಿಕಾರ್ಜುನ ಖರ್ಗೆ ಅವರು ಗೊಂದಲವನ್ನು ಸೃಷ್ಟಿ ಮಾಡಿದವರು ನೀವು. ನೀವೇ ಬಗೆಹರಿಸಿಕೊಳ್ಳಿ ಎಂದು ಹೇಳುವ ಮೂಲಕ ರಾಜ್ಯ ರಾಜಕೀಯದ ಗೊಂದಲಗಳಿಂದ ವಿಮುಖರಾಗುತ್ತಿರುವುದು ಕಂಡು ಬಂದಿದೆ.

ರಾಹುಲ್ ಗಾಂಧಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಅಧಿಕಾರದಲ್ಲಿ ಮುಂದುವರಿಸಬೇಕು ಎಂಬ ಬಲವಾದ ಇಂಗಿತ ಹೊಂದಿದ್ದಾರೆ ಎನ್ನಲಾಗಿದೆ. ಖರ್ಗೆ ಕರ್ನಾಟಕದವೇ ಆಗಿದ್ದರೂ ರಾಜ್ಯ ರಾಜಕೀಯ ಕುರಿತು ಸ್ವತಂತ್ರ ನಿರ್ಧಾರ ತೆಗೆದುಕೊಳ್ಳಲು ಅವರಿಂದ ಸಾಧ್ಯವಾಗುತ್ತಿಲ್ಲ. ಡಿ.ಕೆ.ಶಿವಕುಮಾರ್ ಪಕ್ಷದ ಅಧ್ಯಕ್ಷರು ಎಂಬ ಕಾರಣಕ್ಕೆ ಖರ್ಗೆ ಅವರನ್ನು ನಂಬಿಕೊಂಡಿದ್ದಾರೆ. ರಾಹುಲ್ ಗಾಂಧಿಯವರು ಒಪ್ಪದ ಹಿನ್ನೆಲೆಯಲ್ಲಿ ಖರ್ಗೆ



ಅಸಹಾಯಕರಾಗಿದ್ದಾರೆ ಎಂದು ತಿಳಿದು ಬಂದಿದೆ.ಮುಖ್ಯಮಂತ್ರಿ ಸಿದ್ದರಾಮಯ್ಯ ಪಕ್ಷದ ಅಧ್ಯಕ್ಷರಿಗಿಂತಲೂ ರಾಹುಲ್ ಗಾಂಧಿಯವರನ್ನೆ ಹೆಚ್ಚಾಗಿ ಅವಲಂಬಿಸಿದ್ದಾರೆ. ಈ ವಿಚಾರದಲ್ಲಿ ಖರ್ಗೆ ಅವರ ಪಾತ್ರ ಅಷ್ಟಕ್ಕಷ್ಟೆ? ಎಂಬಂತಾಗಿದೆ. ಕಳೆದ ತಿಂಗಳು ಕೆಲವು ಶಾಸಕರು ದೆಹಲಿ ಯಾತ್ರೆ ನಡೆಸಿದಾಗ ಮಲ್ಲಿಕಾರ್ಜುನ ಖರ್ಗೆ ತಮ ಅಸಮಾಧಾನ ಹೊರಹಾಕಿದ್ದರು. ಎಲ್ಲರೂ ಹೈಕಮಾಂಡ್ ಹೇಳಿದಂತೆ ನಡೆದುಕೊಳ್ಳಬೇಕು ಎಂದಿದ್ದರಲ್ಲದೆ, ಸಿಎಂ ಮತ್ತು ಡಿಸಿಎಂ ಇಬ್ಬರನ್ನೂ ದೆಹಲಿಗೆ ಕರೆಸಿ ವಿಷಯ ಇತ್ಯರ್ಥ ಪಡಿಸುವುದಾಗಿ ತಿಳಿಸಿದ್ದರು.

ಖರ್ಗೆ ಅವರು ದೆಹಲಿಗೆ ಹೋಗುತ್ತಿದ್ದಂತೆ ಇಬ್ಬರನ್ನು ದೆಹಲಿಗೆ ಕರೆಸುವ ಬದಲಿಗೆ, ಉಪಾಹಾರಕೂಟ ನಡೆಸಿ ವಿವಾದ ಬಗೆ ಹರಿಸಿಕೊಳ್ಳಿ ಎಂದು ದೆಹಲಿಯಿಂದ ಕೆ.ಸಿ.ವೇಣುಗೋಪಾಲ್ ಕರೆ ಮಾಡಿ ಸಿದ್ದರಾಮಯ್ಯ ಮತ್ತು ಡಿ.ಕೆ.ಶಿವಕುಮಾರ್ ಅವರಿಗೆ ಸೂಚನೆ ನೀಡಿದ್ದರು.

ಅದರಂತೆ ಇಲ್ಲಿ ಉಪಾಹಾರಕೂಟಗಳು ನಡೆದು ತಾತ್ಕಾಲಿಕ ಕದನ ವಿರಾಮ ಘೋಷಣೆಯಾಗಿತ್ತು. ಆ ಸಂದರ್ಭದಲ್ಲಿ ಮಲ್ಲಿಕಾರ್ಜುನ ಖರ್ಗೆ ಹೈಕಮಾಂಡ್ ಹೇಳಿದಂತೆ ಎಲ್ಲರೂ ಕೇಳಬೇಕು ಎಂದಿದ್ದು, ಹಲವು ಅನುಮಾನಗಳನ್ನು ಹುಟ್ಟು ಹಾಕಿತ್ತು. ಹೈಕಮಾಂಡ್ ಎಂದರೆ ಪಕ್ಷದ ಅಧ್ಯಕ್ಷರೇ ಅಲ್ಲವೇ ? ಪದೇ ಪದೇ ಹೈಕಮಾಂಡ್ ಎಂದು ಹೇಳುವ ಮೂಲಕ ಖರ್ಗೆಯವವರು ತಮಗಿಂತ ಬೇರೆ ಯಾರೋ ಪಕ್ಷದ ಉನ್ನತ ಸ್ಥಾನದಲ್ಲಿದ್ದಾರೆ ಎಂದು ಬಿಂಬಿಸುತ್ತಿದ್ದಾರೆ ಎಂಬ ಅನುಮಾನಗಳು ಚರ್ಚೆಯಾದವು.

ಖರ್ಗೆಯವರು ನೆಪ ಮಾತ್ರಕ್ಕೆ ಅಧ್ಯಕ್ಷರಾಗಿದ್ದಾರೆಯೇ ಅಥವಾ ಅವರ ಮಾತುಗಳಿಗೆ ಪಕ್ಷದಲ್ಲಿ ಮಾನ್ಯತೆ
ಇಲ್ಲವೇ ಎಂಬ ಅನುಮಾನಗಳು ಕಾಡಲಾರಂಭಿಸಿವೆ. ಡಿ.ಕೆ.ಶಿವಕುಮಾರ್ ತಾವು ಮಾಡಿದ ಕೆಲಸಕ್ಕೆ ಹೈಕಮಾಂಡ್ ಕೂಲಿ ನೀಡಲಿದೆ ಎಂದು ಬಲವಾಗಿ ನಂಬಿಕೊಂಡು, ನಾನಾ ರೀತಿಯ ಪ್ರಯತ್ನಗಳನ್ನು ನಡೆಸಿದ್ದರು. ಆದರೆ ಖರ್ಗೆ ಅವರ ಹೇಳಿಕೆ ಎಲ್ಲಾ ಪ್ರಯತ್ನಗಳನ್ನು ಹೊಳೆಯಲ್ಲಿ ಹುಣಿಸೆಹಣ್ಣು ತೊಳೆದಂತೆ ಮಾಡಿದೆ.

ಈ ಮೊದಲು ದೆಹಲಿಗೆ ಕರೆಸಿ ಮಾತನಾಡುವುದಾಗಿ ಹೇಳಿದ್ದ ಖರ್ಗೆಯವರು ಇದ್ದಕ್ಕಿದ್ದ ಹಾಗೇ ಉಲ್ಟಾ ಹೊಡೆದಿದ್ದು ಏಕೆ ಎಂಬ ಅನುಮಾನಗಳು ಕಾಡುತ್ತಿವೆ. ಸಿದ್ದರಾಮಯ್ಯ ಅಹಿಂದ ವರ್ಗದ ಪ್ರಬಲ ನಾಯಕ. ಅವರ ವಿರುದ್ಧ ಯಾವುದೇ ನಿರ್ಣಯ ಕೈಗೊಂಡರೂ ಅದು ಅಪಾಯಕ್ಕೆ ಎಡೆ ಮಾಡಿಕೊಡಲಿದೆ ಎಂಬ ಭಯ ಕಾಂಗ್ರೆಸ್ ವರಿಷ್ಠರನ್ನು ಕಾಡುತ್ತಿದೆಯೇ ? ಅಥವಾ ಡಿ.ಕೆ.ಶಿವಕುಮಾರ್ ಪಕ್ಷದ ನಿಷ್ಠರು ಅವರು ಎಲ್ಲಿಗೂ ಹೋಗುವುದಿಲ್ಲ ಎಂಬ ಉಡಾಫೆಯೇ? ಎಂಬ ಚರ್ಚೆಗಳಿವೆ.

**ಕಾಂತ್ರಿ ಮುಗಿದಿದೆ ಎಂದ ಸಿದ್ದರಾಮಯ್ಯ:** ಮೈಸೂರಿನಲ್ಲಿಂದು ಸುದ್ದಿಗಾರರ ಜೊತೆ ಮಾತನಾಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಸೆಪ್ಟೆಂಬರ್, ನವೆಂಬರ್ ಕ್ರಾಂತಿ ಎಂಬುದು ಮುಗಿದುಹೋಗಿದೆ. ಇನ್ನು ಅದ್ಯಾವುದು ಚರ್ಚೆಯಲಿಲ್ಲ. ಎಲ್ಲವೂ ಸುಖಾಂತ್ಯ ಎಂದು ಹೇಳುವ ಮೂಲಕ ಅಧಿಕಾರ ಹಂಚಿಕೆಯ ಪ್ರಸ್ತಾಪವನ್ನು ಪರೋಕ್ಷವಾಗಿ ತಳ್ಳಿ ಹಾಕಿದ್ದಾರೆ.

ಮುಖ್ಯಮಂತ್ರಿಯಾಗಿ ತಾವೇ ಮುಂದುವರೆಯುವುದಾಗಿ ಬೆಳಗಾವಿಯ ವಿಧಾನ ಮಂಡಲದ ಅಧಿವೇಶನದಲ್ಲಿ ಸಿದ್ದರಾಮಯ್ಯ ಪರೋಕ್ಷ ಸೂಚನೆ ನೀಡಿದ್ದರು.ಈಗ ಕ್ರಾಂತಿ ಮುಗಿದು ಹೋಗಿದೆ ಎಂದು ಹೇಳುವ ಮೂಲಕ ಎಲ್ಲಾ ಚರ್ಚೆಗಳಿಗೂ ತೆರೆ ಎಳೆತಯವ ಪ್ರಯತ್ನ ಮಾಡಿದ್ದಾರೆ. ಅದಕ್ಕೆ ಪೂರಕವಾಗಿ ಖರ್ಗೆ ಅವರ ಹೇಳಿಕೆ ಸಮೀಕರಣಗೊಳ್ಳುತ್ತಿದೆ. ಕಾಂಗ್ರೆಸ್ ಹೈಕಮಾಂಡ್ ಬಲಿಷ್ಠವಾಗಿದೆ. ಯಾವುದೇ ಗೊಂದಲಗಳಿದ್ದರೂ, ಬಗೆ ಹರಿಸಲು ಸಮರ್ಥವಾಗಿದೆ ಎಂದು ಕಾಂಗ್ರೆಸ್ ನಾಯಕರು ಪದೇಪದೇ ಹೇಳಿಕೊಳ್ಳುತ್ತಿದ್ದರು. ಈಗ ಖರ್ಗೆ ಅವರ ಮಾತುಗಳು ಹೈಕಮಾಂಡ್ ಸಾಮರ್ಥ್ಯವನ್ನು ಅನುಮಾನದಿಂದ ನೋಡುವಂತೆ ಮಾಡಿದೆ.

ಪಕ್ಷದ ಅಧ್ಯಕ್ಷರಿಗಿಂತಲೂ ಪ್ರಬಲವಾದ ಹೈಕಮಾಂಡ್ ನಾಯಕತ್ವ ಇನ್ಯಾರದು ? ಎಂಬ ಪ್ರಶ್ನೆ ಕಾಡಲಾರಂಭಿಸಿದೆ. ಕಾಂಗ್ರೆಸ್? ನಲ್ಲಿ ಮೊದಲಿನಿಂದಲೂ ಗಾಂಧಿ ಕುಟುಂಬದವರನ್ನೆ? ಹೈಕಮಾಂಡ್ ಎಂದು ಅಘೋಷಿತವಾಗಿ ನಂಬಲಾಗಿದೆ.

ಸೋನಿಯಾ ಗಾಂಧಿ ಅಧ್ಯಕ್ಷರಾಗಿದ್ದಾಗ ಏವ್ಯಕ್ತಿಯ ಹೈಕಮಾಂಡ್ ನಾಯಕತ್ವ ಇತ್ತು. ರಾಹುಲ್ ಗಾಂಧಿ ಅಧ್ಯಕ್ಷರಾಗಿದ್ದಾಗಲೂ ಸೋನಿಯ ಗಾಂಧಿಯವರೇ ಹೈಕಮಾಂಡ್ ಎಂಬಂತೆ ಬಿಂಬಿಸಲಾಗಿತ್ತು. ಮಲ್ಲಿಕಾರ್ಜುನ ಖರ್ಗೆ ಅಧ್ಯಕ್ಷರಾದ ಬಳಿಕ ಹೈಕಮಾಂಡ್ ಎಂದರೆ ಯಾರು ಎಂಬ ಪ್ರಶ್ನೆ ಕಾಡಲಾರಂಭಿಸಿದೆ.ಸಿದ್ದರಾಮಯ್ಯ ಹೈಕಮಾಂಡ್ ಹೇಳಿದಂತೆ ನಡೆದುಕೊಳ್ಳುತ್ತೆ?ನೆ ಎನ್ನುತ್ತಲೇ ರಾಹುಲ್ ಗಾಂಧಿ ಹೇಳಿದಂತೆ ಎನ್ನುವ ಮೂಲಕ ಮಲ್ಲಿಕಾರ್ಜುನ 2ನೇಪುಟಕ್ಕೆ►

# ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ ಮಾನ್ವಿ ತಾಲೂಕ ಘಟಕಕ್ಕೆ ದೇವೇಂದ್ರ ನಾಯಕ ಆಯ್ಕೆ



ಧೈರ್ಯದ ದಾರಿ

**ಮಾನ್ವಿ,ಡಿ.22–** ಪಟ್ಟಣದ ಪ್ರವಾಸಿ ಮಂದಿರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ (ರಿ) ರಾಯಚೂರು ಜಿಲ್ಲಾ ಅಧ್ಯಕ್ಷರಾದ ಬಿ. ರಾಮಣ್ಣ ನಾಯಕ ಅವರ ಆದೇಶದ ಮೇರೆಗೆ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ (ರಿ) ಮಾನ್ವಿ ತಾಲೂಕ ಘಟಕದ ಅಧ್ಯಕ್ಷರಾಗಿ ದೇವೇಂದ್ರ ನಾಯಕ ಮಾನ್ವಿ ಅವರನ್ನು ನೇಮಕ ಮಾಡಲಾಗಿದೆ.

ನೂತನ ತಾಲೂಕಾಧ್ಯಕ್ಷರಿಗೆ ಸಂಘದ ಎಲ್ಲಾ ತತ್ವ-ಸಿದ್ಧಾಂತಗಳಿಗೆ ಬದ್ಧರಾಗಿ ಶೈಕ್ಷಣಿಕ, ಆರ್ಥಿಕ ಹಾಗೂ ಸಂಘಟನೆಯ ಬಲವರ್ಧನೆಗಾಗಿ ಶ್ರಮಿಸುವಂತೆ ಸೂಚಿಸಿ ಅಧಿಕೃತ ಆದೇಶ ನೀಡಲಾಯಿತು. ನಂತರ ತಾಲೂಕಾಧ್ಯಕ್ಷರಾಗಿ ಆಯ್ಕೆಯಾದ ದೇವೇಂದ್ರ ನಾಯಕ ಅವರಿಗೆ ಅವರ ಅಭಿಮಾನಿ ಬಳಗ ಸನ್ಮಾನಿಸಿ ಗೌರವ ಸಲ್ಲಿಸಿತು.

ಈ ಸಂದರ್ಭದಲ್ಲಿ ನಾಯ್ಡು ನಾಯಕ, ಹನುಮೇಶ್ ನಾಯಕ, ಕೊಂಡಯ್ಯ ನಾಯಕ, ಯಲ್ಲಯ್ಯ ನಾಯಕ, ದೇವರಾಜ್ ನಾಯಕ, ರಮೇಶ್ ನಾಯಕ, ಉಪೇಂದ್ರ ನಾಯಕ, ತಾಯಣ್ಣ ನಾಯಕ, ನರಸಿಂಹ ನಾಯಕ, ಯಲ್ಲಪ್ಪ ನಾಯಕ, ರೇಣುಕಾ ರಾಜಾ ನಾಯಕ, ಜಗದೀಶ್ ನಾಯಕ, ವಿರೇಶ್ ನಾಯಕ, ಮಂಜು ನಾಯಕ, ಈರಯ್ಯ ನಾಯಕ, ವೆಂಕಟೇಶ್ ನಾಯಕ, ವಿಶ್ವನಾಥ ನಾಯಕ, ರಾಜು ನಾಯಕ, ಮಹೇಶ್ ನಾಯಕ, ಶ್ರೀನಿವಾಸ್ ನಾಯಕ, ಚಂದ್ರು ನಾಯಕ, ಪ್ರಜ್ವಲ್ ನಾಯಕ, ಪರಶುರಾಮ್ ನಾಯಕ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ನಕ್ಕುಂದಿ ಗ್ರಾಮದಲ್ಲಿ ಸಂಭ್ರಮದ ಆಂಜಿನೇಯ್ಯ ಉಚ್ಚಾಯ ಮಹೋತ್ಸವ



ಧೈರ್ಯದ ದಾರಿ

**ಮಾನ್ವಿ,ಡಿ.22–** ತಾಲೂಕಿನ ನಕ್ಕುಂದಿ ಗ್ರಾಮದಲ್ಲಿ ಆರಾಧ್ಯ ದೈವ ಶ್ರೀ ಆಂಜಿನೇಯ್ಯ ಸ್ವಾಮಿ ಯ ನೂತನವಾಗಿ ಕಬ್ಬಿಣದಲ್ಲಿ ನಿರ್ಮಿಸಿದ ಉಚ್ಚಾಯ ಮಹೋತ್ಸವವು ಶನಿವಾರದ ಂದು ಹೂವಿನ ಅಲಂಕಾರ, ವಿವಿಧ ಚಿತ್ರಗಳ ಕಲೆಗಳು, ಕೇಸರಿ ಧ್ವಜಗಳಿಂದ ಅಲಂ ಕರಿಸಿ ಅತ್ಯಂತಸಂಭ್ರಮ ಸಡಗರದಿಂದ ನಡೆಯಿತು. ನೂರಾರು ಭಕ್ತರು ಹಾಗೂ ಗ್ರಾಮಸ್ಥರ ಸಾನ್ನಿಧ್ಯದಲ್ಲಿಭಕ್ತಿ, ಸಂಭ್ರಮ ಮತ್ತು ಶಿಸ್ತುಪೂರ್ಣ ವಾತಾವರಣದಲ್ಲಿ ಅತ್ಯಂತ ವೈಭವದಿಂದ ಹುಚ್ಚಯ್ಯ ಮಹೋತ್ಸವವನ್ನು ನಡೆಯಿತು. ಅಂದು ಬೆಳಗ್ಗೆ ರುದ್ರಾಭಿಷೇಕ ಸೇರಿದಂತೆ ಧಾರ್ಮಿಕ ವಿಧಿವಿಧಾನಗಳು, ಪೂಜೆ ಪುನಸ್ಕಾರಗಳು ಮಹೋತ್ಸವಕ್ಕೆ ವಿಶೇಷ ಮೆರುಗು ನೀಡಿದವು. ಪ್ರತಿ ವರ್ಷ ಎಳ್ಳ ಅಮವಾಸ್ಯೆ ದಿನದಂದು ಜರುಗುವ ಈ ಉಚ್ಚಾಯ ಮಹೋತ್ಸವಕ್ಕೆ ಭಕ್ತರ ವಿವಿಧ ಹರಕೆ, ಭಕ್ತಿ ಸೇವೆಗಳನ್ನು ಸಲ್ಲಿಸಿದರು.

# ಅಂಬೇಡ್ಕರ್ ಯುವ ಸೇನೆಯ ಗ್ರಾಮ ಘಟಕ ಅಧ್ಯಕ್ಷರಾಗಿ ಭೀಮು ಮಲ್ಕಪಲ್ಲಿ ಆಯ್ಕೆ



**ಸೇಡಂ,ಡಿ ,22:**ಅಂಬೇಡ್ಕರ್ ಯುವ ಸೇನೆ ಸೇನೆಯ ರಾಜ್ಯಧ್ಯಕ್ಷರಾದ ಶ್ರೀಮತಿ ಕೌಶಲ್ಯ ಹೆಚ್ ಕೋದಂಡರಾಮ್ ಹಾಗೂ ಕಲಬುರಗಿ ಜಿಲ್ಲೆ ಅಧ್ಯಕ್ಷರಾದ ಮಲ್ಲಿಕಾರ್ಜುನ ಎ.ತಳಕೇರಿ ಸೇಡಂ ತಾಲೂಕ ಅಧ್ಯಕ್ಷ ಗೋಪಾಲ ನಾಟೇಕರ್ ರವರ ಆದೇಶದ ಮೇರೆಗೆ ಯುವ ಉತ್ಸಾಹಿ ಸಮಾಜ ಸೇವಕ ಮತ್ತು ಹಿಂದೆ ಅನೇಕ ದಲಿತಪರ ಹೋರಾಟಗಳಲ್ಲಿ ಹೋರಾಡುತ್ತಿರುವ ಮಲ್ಕಪಲ್ಲಿ ಗ್ರಾಮದ ಭೀಮು ಮಾಲ್ಕಪಲ್ಲಿ ಅವರನ್ನು ಗ್ರಾಮ ಘಟಕದ ಅಧ್ಯಕ್ಷರಾಗಿ ಆಯ್ಕೆ ಮಾಡಲಾಗಿದೆ ಹಾಗೂ ಉಪಾಧ್ಯಕ್ಷರಾಗಿ ಲಾಲಪ್ಪ ಮಲ್ಕಪಲ್ಲಿ ಪ್ರಧಾನ ಕಾರ್ಯದರ್ಶಿಯಾಗಿ ಮೌನೇಶ್ ಮಲ್ಕಪಲ್ಲಿ ಅವರನ್ನು ನೇಮಕ ಮಾಡಿ ಆದೇಶಿಸಲಾಗಿದೆ ಎಂದು ತಾಲೂಕ ಅಧ್ಯಕ್ಷ ಗೋಪಾಲ ನಾಟೇಕರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸೋಂಕು ಮರಳದಿರಲು ಲಸಿಕೆ ಹಾಕಿಸಿ

### *ಆಲ್ಕೋಡ ಗ್ರಾಪಂ ಅಧ್ಯಕ್ಷ ಮಹೇಶ ನಾಯಕ ಸಲಹೆ. *ಪಲ್ಸ್ ಪೋಲಿಯೋ ಅಭಿಯಾನಕ್ಕೆ ಚಾಲನೆ.

ಧೈರ್ಯದ ದಾರಿ



**ಅರಕೇರಾ,ಡಿ.22:**ದೇಶವನ್ನು ಪೋಲಿಯೋ ರೋಗದಿಂದ ಸಂಪೂರ್ಣ ಮುಕ್ತವಾಗಿರಿಸಲು ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಪಲ್ಸ್ ಪೋಲಿಯೋ ಅಭಿಯಾನವನ್ನು ಜಾರಿಗೆ ತಂದಿದೆ ಎಂದು ಗ್ರಾಪಂ ಅಧ್ಯಕ್ಷ ಮಹೇಶ ನಾಯಕ ಹೇಳಿದರು.

ತಾಲೂಕಿನ ಆಲ್ಕೋಡ ಗ್ರಾಪಂ ಆವರಣದಲ್ಲಿ ಜಿಪಂ, ಆರೋಗ್ಯ ಇಲಾಖೆ, ಶಿಶು ಅಭಿವೃದ್ಧಿ ಯೋಜನೆ ವತಿಯಿಂದ ಹಮ್ಮಿಕೊಂಡಿದ್ದ ಪಲ್ಸ್ ಪೋಲೀಯೋ ಅಭಿಯಾನಕ್ಕೆ ಭಾನುವಾರ ಚಾಲನೆ ನೀಡಿ ಮಾತನಾಡಿದರು.

ಪೋಲಿಯೋ ರೋಗ ದೇಶದಿಂದ ಸಂಪೂರ್ಣವಾಗಿ ನಿರ್ಮೂಲನೆ ಆಗಿದೆ. ಆದರೆ ವಿದೇಶಗಳಲ್ಲಿ ಈ ರೋಗ ಇನ್ನು ಸಕ್ರಿಯವಾಗಿರುವುದರಿಂದ ನಮ್ಮ ದೇಶದಲ್ಲಿ ಸೋಂಕು ಮರಳದಂತೆ ಎಚ್ಚರ ವಹಿಸಬೇಕು. ಆದ್ದರಿಂದ 0 ರಿಂದ 5 ವರ್ಷ ವಯಸ್ಸಿನ ಎಲ್ಲಾ ಮಕ್ಕಳಿಗೆ ಕಡ್ಡಾಯವಾಗಿ ಪಲ್ಸ್ ಪೋಲೀಯೊ ಲಸಿಕೆ ಹಾಕಿಸಬೇಕು. ಕೇವಲ ಎರಡು ಹನಿ ಲಸಿಕೆ ಸದೃಢ ಆರೋಗ್ಯಕ್ಕೆ ಸಹಕಾರಿಯಾಗುತ್ತದೆ ಎಂದರು.

ಗ್ರಾಪಂ ಸದಸ್ಯ ಅಮರೇಶ ಕುಂಬಾರ, ಎಎಮ್ ಹುಲಿಗೆಮ್ಮ, ಅಂಗನವಾಡಿ ಕಾರ್ಯಕರ್ತೆ ಶಕುಂತಲಾ, ರೇಣುಕಾ ಪ್ರಮುಖರಾದ ಭುವನೇಶ, ಅಮರೇಶ ಅಕ್ಕರಕಿ ಇತರರಿದ್ದರು

## ಮೊದಲನೇ ಪುಟದಿಂದ

# ಗ್ಯಾರಂಟಿ ಯೋಜನೆಗಳಿಂದ ಜನತೆಗೆ ಅನುಕೂಲ: ಎಸ್.ಆರ್.ಮೆಹರೋಜ್

ವಿವಿಯ ವಿದ್ಯಾರ್ಥಿನಿ ಪಾವನಿ ಜೀವಿ ತಿಳಿಸಿದರು. ಗ್ಯಾರಂಟಿ ಯೋಜನೆಗಳಿಂದ ಮಹಿಳೆಯರು ಸ್ವಾವಲಂಬನೆ ಜೀವನ ನಡೆಸುತ್ತಿದ್ದಾರೆ. ಅನೇಕ ಮಹಿಳೆಯರು ಆರ್ಥಿಕವಾಗಿ ಸಬಲರಾಗಿದ್ದಾರೆ ಎಂದು ರಾಯಚೂರಿನ ವಡ್ಲೂರಿನ ಮಹೇಶ್ವರಿ ಅವರು ತಿಳಿಸಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಸದಸ್ಯರು ಹಾಗೂ ಪ್ರಾದೇಶಿಕ ಅಸಮತೋಲನ ತಜ್ಞರಾದ ಡಾ.ರಝಾಕ್ ಉಸ್ತಾದ್, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ, ಕೃಷಿ ವಿವಿಯ ಕುಲಪತಿಗಳಾದ ಡಾ.ಎಂ.ಹನುಮಂತಪ್ಪ, ಆಡಳಿತ ಅಧಿಕಾರಿ ಜಾಗೃತಿ ದೇಶಪಾಂಡೆ, ಜಿಲ್ಲಾ ಪಂಚಾಯತ ಮುಖ್ಯ ಯೋಜನಾ ನಿರ್ದೇಶಕರಾದ ಡಾ.ಟಿ.ರೋಣಿ, ಸಿಡಾಕ್ ಜಂಟಿ ನಿರ್ದೇಶಕರಾದ ಜಿ.ಯು.ಹುಡೇದ್ ಸೇರಿದಂತೆ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಉಪಾಧ್ಯಕ್ಷರು, ಸದಸ್ಯರು ಹಾಗೂ ವಿದ್ಯಾರ್ಥಿಗಳು ಸಭೆಯಲ್ಲಿದ್ದರು.

# ಸಿರಿಧಾನ್ಯಗಳ ಜಾಗೃತಿ ಜಾಥಾಕ್ಕೆ ಸಚಿವ ಎನ್.ಎಸ್.ಬಿ ಚಾಲನೆ

ಮೆರವಣಿಗೆಯುದ್ದಕ್ಕೂ ಸಿರಿಧಾನ್ಯಗಳ ಮಹತ್ವದ ಕುರಿತು ಘೋಷ ವಾಕ್ಯಗಳನ್ನು ಕೂಗಿ ಜಾಗೃತಿ ಮೂಡಿಸಲಾಯಿತು. ಕಾರ್ಯಕ್ರಮದಲ್ಲಿ ಡೊಳ್ಳು ಕುಣಿತ, ಸಿರಿಧಾನ್ಯ ಪ್ರದರ್ಶನ ಗಮನ ಸೆಳೆದವು. ರೈತರಿಗೆ ಸಂಬಂಧಿಸಿದ ನೃತ್ಯ ಪ್ರದರ್ಶನ ವಿಶೇಷವಾಗಿತ್ತು.

ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಕೃಷಿ ವಿಜ್ಞಾನಗಳ ವಿಶ್ವ ವಿದ್ಯಾಲಯದ ಕುಲಪತಿ ಡಾ.ಎಂ.ಹನುಮಂತಪ್ಪ, ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಪ್ರಕಾಶ ಚೌಹಾಣ್, ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ಕೃಷ್ಣ ಶಾವಂತೇಗೇರಾ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಕೃಷಿ ಅಧಿಕಾರಿಗಳು, ಕೃಷಿ ಪರಿಕರ ಮಾರಾಟಗಾರರು, ಕೃಷಿ ಪದವೀಧರ ವಿಧ್ಯಾರ್ಥಿಗಳು ಇದ್ದರು

# ಪೋಲಿಯೋ ಮುಕ್ತ ಭಾರತ-ಪಲ್ಸ್ ಪೋಲಿಯೋ ಅಭಿಯಾನಕ್ಕೆ ಚಾಲನೆ ನೀಡಿದ ಶಾಸಕ ಹಂಪಯ್ಯನಾಯಕ

ಕಾಯಿಲೆ ಬರದಂತೆ ತಡೆಯಬೇಕು ಎಂದು ತಿಳಿಸಿದರು. ತಾಲೂಕು ಆರೋಗ್ಯಾಧಿಕಾರಿ ಡಾ.ಶರಣಬಸವರಾಜ ಮಾತನಾಡಿ ತಾಲೂಕಿನಲ್ಲಿ 0-5 ವರ್ಷದ 47,920 ಮಕ್ಕಳನ್ನು ಆರೋಗ್ಯ ಇಲಾಖೆಯಿಂದ ಗುರುತಿಸಲಾಗಿದೆ ಪೋಲಿಯೋ ಲಸಿಕೆ ಹಾಕುವುದಕ್ಕೆ 221 ಟೀಮ್ ಗಳನ್ನು ರಚಿಸಲಾಗಿದೆ. ಹಾಗೂ33 ಸಂಚಾರಿ ಟೀಮ್‌ಗಳ ಮೂಲಕ ವ್ಯಾಕ್ಸಿನ್ ಸಾಮಾಗ್ರಿಗಳನ್ನು ತಲುಪಿಸುವುದಕ್ಕೆ ಕ್ರಮ ಕೈಗೊಳ್ಳಲಾಗಿದೆ . 442 ಆಶಾ,ಅಂಗನ ವಾಡಿ ಮತ್ತು ಆರೋಗ್ಯ ಇಲಾಖೆಯ ಕಾರ್ಯಕರ್ತರನ್ನು ಪೋಲಿಯೊ ವ್ಯಾಕ್ಸಿನ್ ಹಾಕಲು ನೇಮಿಸಲಾಗಿದೆ.

47 ಸೂಪ ರವೈಸರ್ ಗಳನ್ನು ಕೂಡ ನೇಮಿಸಲಾಗಿದೆ ಮೋದಲ ಹಂತದಲ್ಲಿ ಬೂತ್ ಮಟ್ಟದಲ್ಲಿ ಮಕ್ಕಳಿಗೆ ಪೋಲಿಯೋ ಹನಿ ನೀಡಲಾಗು ವುದು ನಂತರ ಆರೋಗ್ಯ ಇಲಾಖೆ ಸಿಬ್ಬಂದಿಗಳು ಮನೆ ಮನೆಗೆ ಭೇಟಿ ನೀಡಿ ಮಕ್ಕಳಿಗೆ ಪೋಲಿಯೋ ಲಸಿಕೆಯನ್ನು ನೀಡಲಿದ್ದಾರೆ ತಾಲೂಕಿನ ಯಾವೊಂದು ಮಗು ಕೂಡ ಪೋಲಿಯೋ ಲಸಿಕೆಯಿಂದ ವಂಚಿವಾಗದಂತೆ ಆರೋಗ್ಯ ಇಲಾಖೆಯಿಂದ ಅಗತ್ಯ ಸಿದ್ದತೆಗಳನ್ನು ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಜಿಲ್ಲಾ ಮಲೇರಿಯಾ ಅಧಿಕಾರಿ ಡಾ.ಚಂದ್ರಶೇಖರ ಸ್ವಾಮಿ ಪುರಸಭೆ ಮುಖ್ಯಾಧಿಕಾರಿ ಪರಶುರಾಮ ದೇವಮಾನೆ, ತಾ.ಗ್ಯಾರಂಟಿ ಸಮಿತಿ ಅಧ್ಯಕ್ಷರಾದ ಬಿ.ಕೆ.ಅಮರೇಶಪ್ಪ,ನಯೋಪ್ರ ಅಧ್ಯಕ್ಷರಾದ ಅಬ್ದುಲ್ ಗಫೂರ್ ಸಾಬ್,ಕಾಮೇಶ್ ಮಂದಕಲ್, ಸತ್ತರ್ ಬಂಗ್ಲೆವಾಲ,ತಾ. ಪ್ರಾಭಾರಿ ಶಿಶುಅಭಿವೃದ್ಧಿ ಅಧಿಕಾರಿ ಗೋಕುಲ್,ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಆರೋಗ್ಯ ಇಲಾಖೆಯ ಸಿಬ್ಬಂದಿಗಳು ಪಾಲಕರು ಭಾಗವಹಿಸಿದರು.

# ರಾಯಚೂರು ಉತ್ಸವಕ್ಕೆ ಸಿದ್ಧತೆ ಈ ಕ್ಷಣದಿಂದಲೇ ಆರಂಭವಾಗಲಿ; ಜಿಲ್ಲಾಧಿಕಾರಿ ನಿತೀಶ್ ಕೆ. ನಿರ್ದೇಶನ

ಜಿಲ್ಲೆಯ ಹೆಸರು ಕೆಡದಂತೆ ಜಣಸಂದಣಿ ನಿರ್ವಹಣೆಗೆ ಶಿಸ್ತುಬದ್ಧ ಯೋಜನೆ ರೂಪಿಸಬೇಕು. ವಾಹನಗಳ ಪಾರ್ಕಿಂಗಗೆ ಮಾರ್ಗಸೂಚಿ ರೂಪಿಸಿ ವಾಹನ ಮತ್ತು ಜನ ಸಂಚಾರಕ್ಕೆ ಸುಗಮ ವ್ಯವಸ್ಥೆ ಮಾಡಬೇಕು ಎಂದು ಜಿಲ್ಲಾಧಿಕಾರಿಗಳು ಪೊಲೀಸ್ ಇಲಾಖೆಗೆ ಸೂಚನೆ ನೀಡಿದರು.

ಜಿಲ್ಲಾ ಪಂಚಾಯತ್ ಸಿಇಓ ಈಶ್ವರ ಕಾಂದೂ ಮಾತನಾಡಿ, ಜಿಲ್ಲಾ ಉತ್ಸವವು ಅರ್ಥಪೂರ್ಣವಾಗಿ ಹಾಗೂ ವ್ಯವಸ್ಥಿತವಾಗಿ ನಡೆಯಲು ಈಗಾಗಲೇ ವಿವಿಧ ಸಮಿತಿಗಳನ್ನು ರಚಿಸಲಾಗಿದ್ದು, ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ವಹಿಸಿದ ಕೆಲಸಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕೆಂದು ಸೂಚನೆ ನೀಡಿದರು.

ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಮಾತನಾಡಿ, ಅಧಿಕಾರಿಗಳು ಮತ್ತು ಸಿಬ್ಬಂದಿ ಜಾಗೃತೆಯಿಂದ ಕೆಲಸ ಮಾಡಬೇಕು. ಗೊಂದಲಗಳಿದ್ದರೆ ಕೇಳಿ ಈಗಿನಿಂದಲೇ ಕೆಲಸ ಆರಂಭಿಸಬೇಕು. ಯಾರು ಸಹ ನಿರ್ಲಕ್ಷ್ಯ ಮಾಡಬಾರದು ಎಂದು ಎಚ್ಚರಿಕೆ ನೀಡಿದರು. ಸ್ವಾಗತ ಮತ್ತು ಶಿಷ್ಟಾಚಾರ ಸಮಿತಿಯ ಸದಸ್ಯ ಕಾರ್ಯದರ್ಶಿಗಳು ಹಾಗೂ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಮಾತನಾಡಿ, ಆಯಾ ಸಮಿತಿಗಳ ವಿವರ, ನೇಮಿಸಿದ ಅಧಿಕಾರಿಗಳು ಮತ್ತು ಸಿಬ್ಬಂದಿ ವಿವರ ಹಾಗೂ ಕೆಲಸದ ಹಂಚಿಕೆಯ ವಿವರದ ಬಗ್ಗೆ ಸಮಗ್ರ ಮಾಹಿತಿ ನೀಡಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ, ಸಹಾಯಕ ಆಯುಕ್ತರಾದ ಗಜಾನನ ಬಾಳೆ, ಬಸವಣ್ಣೆಪ್ಪ ಕಲಶೆಟ್ಟಿ, ಪಾಲಿಕೆಯ ಸಮಿತಿ ಕಾರ್ಯದರ್ಶಿ ಶ್ರೀ ಕೃಷ್ಣ ಶಾವಂತಗೇರಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಈರಣ್ಣ, ಮಹಾನಗರ ಪಾಲಿಕೆಯ ಉಪ ಆಯುಕ್ತರಾದ ಸಂತೋಷರಾಣಿ, ಆಯಾ ತಾಲೂಕಿನ ತಹಸೀಲ್ದಾರರು ಮತ್ತು ವಿವಿಧ ಇಲಾಖೆಗಳ ಅಧಿಕಾರಿಗಳು ಸಭೆಯಲ್ಲಿದ್ದರು.

## ಮಲ್ಲಿಕಾರ್ಜುನ ಖರ್ಗೆ ನೆಪ ಮಾತ್ರಕ್ಕೆ ಎಐಸಿಸಿ ಅಧ್ಯಕ್ಷ..? : 'ಕೈ'ಕಮಾಂಡ್ ಗೊಂದಲ

ಖರ್ಗೆ ಅವರನ್ನು ಹೈಕಮಾಂಡ್ ನಾಯಕರು ಎಂದು ಪರಿಗಣಿಸದಿರುವಂತೆ ಕಂಡು ಬರುತ್ತಿದೆ. ರಾಜಕಾರಣದ ಗೊಂದಲಗಳಿಗೆ ವರಿಷ್ಠರು ಪರಿಹಾರ ಸೂಚಿಸುತ್ತಾರೆ ಎಂದು ಕಾದು ಕುಳಿತಿದ್ದ ರಾಜ್ಯದ ನಾಯಕರಿಗೆ ಈಗ ವರಿಷ್ಠರಲ್ಲೆ? ಗೊಂದಲಗಳಿರುವ ಅನುಮಾನ ಕಾಡುತ್ತಿದೆ.

# ಹೆಚ್.ಸಿದ್ದಾಪೂರ ಗ್ರಾ.ಪಂ. ಅರಕೇರಾದಿಂದ ದೇವದುರ್ಗಕ್ಕೆ ಸೇರ್ಪಡೆ ಆಕ್ಷೇಪಣೆ ಅವಕಾಶ

ಧೈರ್ಯದ ದಾರಿ



**ಅರಕೇರಾ,ಡಿ.22–**ಹೆಚ್ .ಸಿದ್ದಾಪುರ ಗ್ರಾಮ ಪಂಚಾಯತಿ ವ್ಯಾಪ್ತಿಯ 6 ಗ್ರಾಮಗಳನ್ನು ನೂತನ ತಾಲೂಕು ಕೇಂದ್ರವಾಗಿರುವ ಅರಕೇರಾಕ್ಕೆ ತಾಲೂಕಿಗೆ ಸೇರಿಸಲಾಗಿತ್ತು. ಆ ಗ್ರಾಮಗಳಲ್ಲಿ ಮರಳಿ ದೇವದುರ್ಗ ತಾಲೂಕಿಗೆ ಸೇರ್ಪಡೆಮಾಡಲು ಆಕ್ಷೇಪಣೆಗಳು ಸಲ್ಲಿಸಲು ಡಿ.30 ರವರಗೆ ಕಾಲಾವಾಕಾಶ ಕಲ್ಪಿಸಲಾಗಿದೆ. ಎಂದು ಅರಕೇರಾ ತಹಶೀಲ್ದಾರ ಅಮರೇಶ ಬಿರಾದಾರ ತಿಳಿಸಿದ್ದಾರೆ.

ಈಗಾಗಲೇ ರಾಯಚೂರು ಜಿಲ್ಲಾಧಿಕಾರಿಗಳು, ರಾಜ್ಯ ಸರಕಾರದ ಕಂದಾಯ ಇಲಾಖೆ ಪ್ರಧಾನ ಕಾರ್ಯದರ್ಶಿ ಬೆಂಗಳೂರು ಅವರು ಪತ್ರ ಬರೆದು ತಿಳಿಸಿದ್ದಾರೆ, ಅರಕೇರಾ ತಾಲ್ಲೂಕಿನ ಹೆಚ್.ಸಿದ್ದಾಪೂರ ಗ್ರಾಮ ಪಂಚಾಯತಿ ವ್ಯಾಪ್ತಿಯ 6 ಗ್ರಾಮಗಳನ್ನು ದೇವದುರ್ಗ ತಾಲೂಕಿಗೆ ಸೇರ್ಪಡೆಗೊಳಿಸಿ. ದಿನಾಂಕ 1-12-2025 ರಂದು ಪ್ರಾಥಮಿಕ ಅಧಿಸೂಚನೆ ಹೊರಡಿಸಿದ್ದು.ಆಧಿಸೂಚನ 'ಯನ್ನು ರಾಜ್ಯ ಪತ್ರದಲ್ಲಿ ಪ್ರಟಿಸಲಾಗಿದೆ.

ಅಧಿಸೂಚನೆಯಲ್ಲಿ ತಿಳಿಸಿರುವಂತೆ ರಾಜ್ಯ ಪತ್ರದಲ್ಲಿ ಪ್ರಕಟಗೊಂಡ 30 ದಿನಗಳ ಒಳಗಾಗಿ ಸ್ವೀಕೃತವಾಗುವ ಆಕ್ಷೇಪಣೆ ಸಲಹೆಗಳನ್ನು ಪರಿಶೀಲಿಸಿ ಅಂತಿಮ ಅಧಿಸೂಚನೆಯನ್ನು. ಹೊರಡಿಸಲು ಕ್ರಮ ಕೈಗೊಳ್ಳಬೇಕಾಗಿರುತ್ತದೆ. ಈಹಿನ್ನೆಯಲ್ಲಿ ಅಧಿಸೂಚನೆಯನ್ನು ಪ್ರಚಾರ ಪಡಿಸಿ ನಿಗದಿತ ಅವಧಿಯಲ್ಲಿ ಸ್ವೀಕೃತವಾಗುವ ಎಲ್ಲಾ ಆಕ್ಷೇಪಣೆ ಸಲಹೆಗಳನ್ನು ಸೂಕ್ತ ರೀತಿಯಲ್ಲಿ ಪರಿಶೀಲಿಸಿ ತಮ್ಮ ಸ್ಪಷ್ಟ ಅಭಿಪ್ರಾಯದೊಂದಿಗೆ ಸರಕಾರಕ್ಕೆ ವರದಿ ಸಲ್ಲಿಸುವಂತೆ ತಿಳಿಸಿರುತ್ತಾರೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಚಿತ್ರಸುದ್ದಿ ಸಂಖ್ಯೆ 21(1)ತಹಶೀಲ್ದಾರ ಅಮರೇಶ ಬಿರಾದಾರ ಅರಕೇರಾ

# ನಾಳೆ ಕಿಷ್ಕಿಂದ ವಿವಿಯ ಪ್ರಥಮ ಘಟಿಕೋತ್ಸವ

**ಬಳ್ಳಾರಿ, ಡಿ.22–** ಜಿಲ್ಲೆಯ ಸಿರುಗುಪ್ಪ ತಾಲೂಕಿನ ಸಿಂದಗೇರಿ ಬಳಿ ಇರುವ ಕಿಷ್ಕಿಂದ ವಿಶ್ವವಿದ್ಯಾಲಯದ ಎಂಬಿಎ ಹಾಗೂ ಎಂಸಿಎ ಕೋರ್ಸ್‌ಗಳ ಮೊದಲ ಬ್ಯಾಚ್ನ ವಿದ್ಯಾರ್ಥಿಗಳ ಪದವಿ ಪ್ರದಾನ ಸಮಾರಂಭ ಮತ್ತು ವಿಶ್ವವಿದ್ಯಾಲಯದ ಪ್ರಥಮ ಘಟಿಕೋತ್ಸವ ನಾಳೆರಂದು ವಿವಿಯ ಮೌಂಟ್ ವ್ಯೂ ಕ್ಯಾಂಪಸ್ನಲ್ಲಿ ನಡೆಯಲಿದೆ ಎಂದು ವಿವಿಯ ಕುಲಪತಿ ಪ್ರೊ. ಟಿ.ಎನ್. ನಾಗಭೂಷಣ ಹೇಳಿದ್ದಾರೆ.

ಅವರು ಇಂದು ನಗರದಲ್ಲಿರುವ ವಿವಿಯ ಕಟ್ಟಡದಲ್ಲಿ ಸುದ್ದಿಗೋಷ್ಠಿ ನಡೆಸಿ ಈ ವಿಷಯ ತಿಳಿಸಿದರು.

ಈ ಘಟಿಕೋತ್ಸವದಲ್ಲಿ 80 ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಿದೆ. ಎಂಬಿಎ ನಲ್ಲಿ ಏಳು ಜನರಿಗೆ, ಎಂಸಿಎನಲ್ಲಿ ಮೂರು ಜನರಿಗೆ ಱ್ಯಾಂಕ್ ನೀಡಲಿದೆ.

ಎಂಬಿಎನಲ್ಲಿ, ಶಬಾನಾ ಅವರು 9.33 ಸಿಜಿಪಿಎದೊಂದಿಗೆ ಪ್ರಥಮ ಯಾರ್ಂಕ್ ಪಡೆದು ಚಿನ್ನದ ಪದಕ. ಸೌಗಂಧಿಕಾ ಲಕ್ಷ್ಮಿ ಅವರು 9.27 ಸಿಜಿಪಿಎದೊಂದಿಗೆ ದ್ವಿತೀಯ ಯಾರ್ಂಕ್ ಪಡೆದು ಬೆಳ್ಳಿಯ ಪದಕ.ಎಂಸಿಎ ವಿಭಾಗದಲ್ಲಿ, ಸಜ್ಜ ಜಗತಿ ಅವರು ಅತ್ಯುತ್ತಮ 9.82 ಸಿಜಿಪಿಎದೊಂದಿಗೆ ಪ್ರಥಮ ಯಾರ್ಂಕ್ ಪಡೆದು ಚಿನ್ನದ ಪದಕವನ್ನು ಸ್ವೀಕರಿಸಲಿದ್ದು, ಸಂಧ್ಯಾ ಜಿ ಅವರು 9.66 ಸಿಜಿಪಿಎದೊಂದಿಗೆ ದ್ವಿತೀಯ ಯಾರ್ಂಕ್ ಪಡೆದು ಬೆಳ್ಳಿಯ ಪದಕವನ್ನು ಪಡೆಯಲಿದ್ದಾರೆ.




ರಾಜ್ಯದ ರಾಜ್ಯಪಾಲ ಥಾವರ್ಚಂದ್ ಗೆಹ್ಲೋಟ ಆಗಮಿಸಿ ಘಟಿಕೋತ್ಸವ ಭಾಷಣ ಮಾಡಲಿದ್ದಾರೆ. ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ. ಸುಧಾಕರ್, ಮಾಜಿ ಮುಖ್ಯಮಂತ್ರಿ, ಸಂಸದ ಜಗದೀಶ್ ಶೆಟ್ಟರ್, ಸಿರುಗುಪ್ಪ ಶಾಸಕ ಬಿ.ಎಂ. ನಾಗರಾಜ. ಸಿಂಧನೂರು ಶಾಸಕ ಬಾದರ್ಲಿ ಹಂಪನಗೌಡ ಆಗಮಿಸಲಿದ್ದಾರೆಂದು ವಿವರಿಸಿದರು. ಮುಂದಿನ ವರ್ಷಗಳಲ್ಲಿ ಬಿ.ಫಾರ್ಮಸಿ, ಡಿ.ಫಾರ್ಮಸಿ ಆರಂಭಿಸುವ ಯೋಜನೆ ಇದೆಂದರು.

ಕುಲಾಧಿಪತಿ ಡಾ. ಯಶವಂತ್ ಭೂಪಾಲ್, ನಮ್ಮ ವಿವಿಯ ಪ್ರಥಮ ಘಟಿಕೋತ್ಸವ ಕಿಷ್ಕಂದ ವಿಶ್ವವಿದ್ಯಾಲಯದ ದೃಷ್ಟಿಕೋನ, ಶೈಕ್ಷಣಿಕ ಗುಣಮಟ್ಟ ಹಾಗೂ ಸಮಾಜಮುಖಿ ಬದ್ಧತೆಯನ್ನು ಪ್ರತಿನಿಧಿಸುತ್ತದೆ. ವಿದ್ಯಾರ್ಥಿಗಳು ಸಮಾಜ ನಿರ್ಮಾಣದಲ್ಲಿ ನಾಯಕತ್ವ ವಹಿಸಬೇಕೆಂದರು.

ಸಹಕುಲಾಧಿಪತಿ ವೈ.ಜೆ. ಪೃಥ್ವಿರಾಜ್ ಭೂಪಾಲ್ ಮಾತನಾಡಿ, "ವಿಶ್ವವಿದ್ಯಾಲಯವು ನಾವೀನ್ಯತೆ, ಕೌಶಲ್ಯಾಧಾರಿತ ಶಿಕ್ಷಣ ಮತ್ತು ಮೌಲ್ಯಾಧಾರಿತ ಅಧ್ಯಯನಕ್ಕೆ ಆದ್ಯತೆ ನೀಡುತ್ತಿದೆ. ಪದವಿ ಪಡೆದ ವಿದ್ಯಾರ್ಥಿಗಳು ಜಾಗತಿಕ ಮಟ್ಟದಲ್ಲಿ ಸ್ಪರ್ಧಿಸುವ ಸಾಮರ್ಥ್ಯ ಹೊಂದಿದ್ದಾರೆ. ನಮ್ಮಲ್ಲಿನ ವಿದ್ಯಾರ್ಥಿಗಳು ಬೆಂಗಳೂರಿನ ಕಾಲೇಜಿಗಳಿಗಿಂತಲೂ ಹೆಚ್ಚಿನ ಆದ್ಯತೆ ಪಡೆಯುತ್ತಿದ್ದಾರೆ. ವಿವಿಯಲ್ಲಿ 20 ಸಾವಿರ ಚದರ ಅಡಿಯ ಸ್ಥಳವನ್ನು ಸ್ಟಾಟಪ್ ಕಾರ್ಯಗಳಿಗೆ ಮೀಸಲಿರಿಸಿದೆಂದು ತಿಳಿಸಿದರು. ನಮ್ಮ ಕಾಲೇಜಿನಲ್ಲಿ ಶೇ 85 ರಷ್ಟು ಸೀಟುಗಳು ಭರ್ತಿಯಾಗಿವೆ ಎಂದರು.

ಕಿಷ್ಕಂದ ವಿಶ್ವವಿದ್ಯಾಲಯದ ಕಲ್ಯಾಣ ಕರ್ನಾಟಕದ ಭಾಗದ ವಿದ್ಯಾರ್ಥಿಗಳಿಗೆ ಉತ್ಕೃಷ್ಟ ಶಿಕ್ಷಣ ನೀಡುವತ್ತ ದಾಪುಗಾಲು ಹಾಕುತ್ತಿರುವುದು ಆಶಾದಾಯಕ ಬೆಳವಣಿಗೆಯಾಗಿದೆ ಎಂದು ಟಿ.ಇ. ಹೆಚ್.ಆರ್.ಡಿ ಟ್ರಸ್ಟ್ನ ಅಧ್ಯಕ್ಷ ಡಾ. ಎಸ್.ಜೆ.ವಿ. ಮಹಿಪಾಲ್ ತಿಳಿಸಿದರು.

ಕುಲಸಚಿವ ಡಾ. ಯು. ಈರಣ್ಣ ಅವರು, ಸಮಾಜದ ನೈತಿಕ, ಆಧ್ಯಾತ್ಮಿಕ ಹಾಗೂ ಮಾನವೀಯ ಮೌಲ್ಯಗಳನ್ನು ಉತ್ತೇಜಿಸುವಲ್ಲಿ ಅಪಾರ ಸೇವೆ ಸಲ್ಲಿಸಿರುವ ವಳಬಳ್ಳಾರಿ ಗ್ರಾಮದ ಸುವರ್ಣಗಿರಿ ವಿರಕ್ತ ಮಠದ ಸಿದ್ಧಲಿಂಗಸ್ವಾಮಿಗಳಿಗೆ ಗೌರವ ಡಾಕ್ಟರೇಟ್ ಪದವಿ ಪ್ರದಾನ ಮಾಡಲಾಗುತ್ತದೆಂದರು.

ಸುದ್ದಿಗೋಷ್ಠಿಯಲ್ಲಿ ಡಾ. ರಾಜು ಜಾಡರ್ , ಹಣಕಾಸು ಅಧಿಕಾರಿ ವೈ. ನಮ್ರತಾ ಉಪಸ್ಥಿತರಿದ್ದರು.

# ಸರ್ಕಾರಿ ವೈದ್ಯಕೀಯ ಕಾಲೇಜು ಹೋರಾಟ 96ನೇ ದಿನಕ್ಕೆ: ಎಂಎಲ್ಸಿ ಕೇಶವ ಪ್ರಸಾದ ಬೆಂಬಲ



**ವಿಜಯಪುರ,ಡಿ. 22:** ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆಗೆ ಆಗ್ರಹಿಸಿ ಕಳೆದ 96 ದಿನಗಳಿಂದ ನಡೆಯುತ್ತಿರುವ ಹೋರಾಟಕ್ಕೆ ಬಿಜೆಪಿ ಎಂಎಲ್ಸಿ ಕೇಶವಪ್ರಸಾದ್ ಭಾನುವಾರ ಸಂಜೆ ಸ್ಥಳಕ್ಕೆ ಭೇಟಿ ನೀಡಿ ಬೆಂಬಲ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಕೇಶವ ಪ್ರಸಾದ ಅವರು ಮಾತನಾಡಿ, ವಿಜಯಪುರ ಜಿಲ್ಲೆಯಲ್ಲಿ ಒಂದು ಸರಕಾರಿ ವೈದ್ಯಕೀಯ ಕಾಲೇಜಿಗಾಗಿ ಕಳೆದ ಮೂರು ತಿಂಗಳಿನಿಂದ ಹೋರಾಟ ನಡೆಯುತ್ತಿದೆ. ಸರಕಾರ ಇದಕ್ಕೆ ಯಾವ ರೀತಿ ಸ್ಪಂದಿಸುತ್ತಿದೆ ಎಂದು ತಿಳಿದುಕೊಳ್ಳುವ ಆತುರ ನನಗಿತ್ತು. 80 ದಿನಗಳಾದರೂ ನಿಮ್ಮನ್ನು ಮುಖ್ಯಮಂತ್ರಿಗಳ ಭೇಟಿಗಾಗಿ ಕರೆದುಕೊಂಡು ಹೋಗಬೇಕೆನ್ನುವುದು ತುಂಬಾ ತಡವಾಯಿತು. ಕರೆದುಕೊಂಡು ಹೋದಾಗ ಅವರನ್ನು ಗೌರವದಿಂದ ನಡೆಸಿಕೊಳ್ಳಬೇಕು. ಜನಪ್ರತಿನಿಧಿಗಳು ಎನಿಸಿಕೊಂಡವರು ಜಿಲ್ಲೆಯ ಸಮಸ್ಯೆಗಳ ಕುರಿತು ಮೊದಲೆ ಗಮನಹರಿಸಬೇಕಾಗಿತ್ತು. ಜಿಲ್ಲೆಯ ಉಸ್ತುವಾರಿ ಸಚಿವರು ಇದನ್ನು ಗಮನಿಸಬೇಕಾಗಿತ್ತು. ಈ ಜಿಲ್ಲೆ ಅವಿಭಜಿತ ಜಿಲ್ಲೆಯಾಗಿದ್ದು, 153 ಎಕರೆ ಸುಸಜ್ಜಿತ ಜಾಗವನ್ನು ಹೊಂದಿದ್ದು, ಇಷ್ಟು ದೊಡ್ಡ ಜಿಲ್ಲೆಗೆ ವೈದ್ಯಕೀಯ ಕಾಲೇಜು ಆಗಲೇಬೇಕು. ಹೋರಾಟಗಾರರನ್ನು ಹಗುರವಾಗಿ ಕಾಣಬಾರದು. 96 ದಿನಗಳಿಂದ ನಡೆಯುವ ಹೋರಾಟವನ್ನು ಗಂಭೀರವಾಗಿ ತೆಗೆದುಕೊಳ್ಳಬೇಕು. ಚಳಿಗಾಲ ಅಧಿವೇಶನ ಮುಗಿದಿದೆ. ಈಗ ಅವಕಾಶ ಇದೆ. ಮುಖ್ಯಮಂತ್ರಿಗಳು ಹಾಗೂ ಉಸ್ತುವಾರಿ ಸಚಿವರು ಇದರ ಬಗ್ಗೆ ಗಂಭೀರವಾಗಿ ಯೋಚನೆ ಮಾಡಿ ಸಾರ್ವಜನಿಕ ಹಿತದೃಷ್ಟಿಯಿಂದ ವಿಜಯಪುರ ಜಿಲ್ಲೆಗೆ ವೈದ್ಯಕೀಯ ಕಾಲೇಜು ತಂದೆ ತರುತ್ತೇವೆ ಎಂದು ಪಣ ತೊಡಬೇಕು ಎಂದು ಹೇಳಿದರು.

ಈಗಲೂ ಕಾಲ ಮಿಂಚಿಲ್ಲ. ಹೋರಾಟಗಾರರ ಕಳಕಳಿಯನ್ನು ಅರಿತು, ಮುಖ್ಯಮಂತ್ರಿಯವರನ್ನು ಭೇಟಿ ಮಾಡಿ ಹಣ ಯಾವ ರೀತಿ ಹೊಂದಿಸಬೇಕು. ಕಾಲೇಜು ಆರಂಭಿಸಲು ಏನು ಕ್ರಮ ಎಂಬುದನ್ನು ತಿಳಿದು ಕಾಲೇಜು ಆರಂಭಿಸಬೇಕು ಎಂದು ಕಳಕಳಿಯ ಮನವಿ ಮಾಡಿಕೊಳ್ಳುತ್ತೇವೆ ಎಂದು ಹೇಳಿದರು.

ರಮೇಶ ಬಿದನೂರ ಅವರು ಮಾತನಾಡಿ, ನಮ್ಮ ಬಿಜೆಪಿ ಪಕ್ಷದಿಂದ ಹೋರಾಟಕ್ಕೆ ಸಂಪೂರ್ಣ ಬೆಂಬಲ ನೀಡುತ್ತೇವೆ. ನಮ್ಮ ಜಿಲ್ಲೆಗೆ ಹೋರಾಟದ ಇತಿಹಾಸ ಇದೆ. ಕುಡಿಯುವ ನೀರು, ಬ್ರಾಡ್‌ಗೇಜ್ ಇನ್ನಿತರ ಹಲವಾರು ಹೋರಾಟಗಳನ್ನು ಮಾಡಿರುವ ಇತಿಹಾಸವಿದೆ. ನಮ್ಮ ಜಿಲ್ಲೆಯಲ್ಲಿ ಹೊಂದಾಣಿಕೆಯ ರಾಜಕಾರಣ ನಡೆಯುತ್ತಿದೆ ಎಂದು ಹೇಳಿದರು.

ನಮ್ಮ ಜಿಲ್ಲೆಯ ಶಾಸಕರು, ಸಂಸದರು ಸಾರ್ವಜನಿಕ ಹೋರಾಟದ ಮೂಲಕ ತಮ್ಮ ರಾಜಕೀಯವನ್ನು ಕಂಡುಕೊಂಡವರು. ಆದರೆ ನಮ್ಮ ಜಿಲ್ಲೆಗೆ ಇರುವ ಹಲವು ಕಾಲೇಜುಗಳು ಸರ್ಕಾರದಿಂದ ತೆಗೆದುಕೊಳ್ಳದೆ ಖಾಸಗಿ ಮಾಡಿಕೊಂಡು ಹೊರಟಿದ್ದಾರೆ. 153 ಎಕರೆ ಜಾಗ, ಬರುವ ರೋಗಿಗಳ ಸಂಖ್ಯೆ, ಪ್ರತಿಯೊಂದು ವಿಭಾಗಗಳು ಇವೆ. ಅವುಗಳ ನೋಡಿಕೊಂಡರೆ ಸರ್ಕಾರಿ ಕಾಲೇಜು ಮಾಡುವ ಎಲ್ಲಾ ಅವಕಾಶಗಳು ಇವೆ. ನಮ್ಮ ಜಿಲ್ಲೆ ಅತ್ಯಂತ ಗ್ರಾಮೀಣ ವರ್ಗದ ಜಿಲ್ಲೆಯಾಗಿದೆ. ಅದಕ್ಕಾಗಿ ಸರ್ಕಾರ ಈ ಕೂಡಲೇ ಸರಕಾರಿ ವೈದ್ಯಕೀಯ ಕಾಲೇಜು ಆರಂಭಿಸಬೇಕೆಂದು ಹೇಳಿದರು.

ಬಿಜೆಪಿಯ ಹಿರಿಯ ನಾಯಕರಾದ ವಿಜುಗೌಡ ಪಾಟೀಲ ಅವರು ಮಾತನಾಡಿ, ನಮ್ಮ ಜಿಲ್ಲೆಯ ಶಾಸಕರು, ಸಚಿವರು ಬೆಳಗಾವಿಯ ಚಳಿಗಾಲದ ಅಧಿವೇಶನದಲ್ಲಿ ಯಾರೂ ಕೂಡ ಧ್ವನಿ ಎತ್ತಲಿಲ್ಲ. ಧ್ವನಿ ಎತ್ತಿದವರು ವಿಧಾನ ಪರಿಷತ್ ಸದಸ್ಯ ಕೇಶವಪ್ರಸಾದ್ ಅವರು ಮಾತ್ರ ಎಂದು ಹೇಳಿದರು. ಹೋರಾಟಗಾರರನ್ನು ಬೆಂಗಳೂರಿಗೆ ನಿಯೋಗದಲ್ಲಿ ಕರೆಯಿಸಿ ಸರಿಯಾಗಿ ಗೌರವ ನೀಡದೆ ಕಳಿಸಿದ್ದಾರೆ. ಜಿಲ್ಲೆಗೆ ವೈದ್ಯಕೀಯ ಕಾಲೇಜು ಆಗುವ ಎಲ್ಲಾ ಅವಕಾಶಗಳಿದ್ದರೂ ಕೂಡ ಆರಂಭಿಸಲು ಹಿಂದೇಟು ಹಾಕುತ್ತಿದ್ದಾರೆ. ಕಾಲೇಜು ಆರಂಭಿಸಿದರೆ ನಿರುದ್ಯೋಗಿಗಳಿಗೆ ಉದ್ಯೋಗ ದೊರೆಯುತ್ತದೆ. 50-60 ಹೆಣ್ಣು ಮಕ್ಕಳು ಪ್ರತಿದಿನ ಚಿಕಿತ್ಸೆಯನ್ನು ಉಚಿತವಾಗಿ ಪಡೆಯುತ್ತಿದ್ದಾರೆ. ಖಾಸಗಿಯಲ್ಲಿ 60 ಸಾವಿರದಿಂದ 1 ಲಕ್ಷ ಹಣ ಕೊಟ್ಟು ಚಿಕಿತ್ಸೆ ತೆಗೆದುಕೊಳ್ಳುತ್ತಿರುವುದನ್ನು ನಾವು ಕಾಣುತ್ತಿದ್ದೇವೆ. ಅದಕ್ಕಾಗಿ ನಮ್ಮ ಜಿಲ್ಲೆಗೆ ಸರಕಾರಿ ವೈದ್ಯಕೀಯ ಕಾಲೇಜು ಅವಶ್ಯಕತೆ ಇದೆ ಎಂದು ಹೇಳಿದರು.

ಗುರುಲಿಂಗಪ್ಪ ಅಂಗಡಿ, ಚಂದ್ರಶೇಖರ ಕವಟಗಿ, ಉಮೇಶ ಕಾರಜೋಳ, ಉಮೇಶ ಕೋಳಕೂರ, ಚಿದಾನಂದ ಚಲವಾದಿ, ಸಂಜು ಐಹೊಳೆ, ಚಿನ್ನು ಚಿನಗುಂಡಿ, ಸಂದೀಪ ಪಾಟೀಲ, ಭೀಮಸಿಂಗ ರಾಥೋಡ, ವಿಜಯ ಜೋಶಿ, ಕೃಷ್ಣ ಗುನ್ನಾಳಕರ ಮತ್ತಿತರರು ಭಾಗವಹಿಸಿದ್ದರು.

ಹೋರಾಟ ಸಮಿತಿಯ ಎಲ್ಲಾ ಸದಸ್ಯರು ಉಪಸ್ಥಿತರಿದ್ದರು.

## ತೊಗರಿಗೆ 12500 ದರ ನಿಗದಿಗೆ ಕೇಂದ್ರ -ರಾಜ್ಯ ಸರಕಾರಕ್ಕೆ ಒತ್ತಾಯ



**ಜೇವರ್ಗಿ: ಡಿ.22:**ತೊಗರಿ ಬೆಳೆಗೆ ಪ್ರತಿ ಕ್ವಿಂಟಾಲಗೆ 12500ರೂ ಬೆಂಬಲ ಬೆಲೆ ನಿಗದಿ ಪಡಿಸಬೇಕು ಮತ್ತು ಕೇಂದ್ರ ಸರಕಾರವು 1000 ಸಾವಿರ ರೂ. ರಾಜ್ಯ ಸರಕಾರವು 500 ರೂ. ಹೆಚ್ಚುವರಿಯಾಗಿ ಪ್ರೋತ್ಸಾಹ ಧನ ನೀಡಬೇಕು. ಎಂದು ಜೈ ಕರವೇ ತಾಲ್ಲೂಕು ಸಂಘಟನೆ ಅಧ್ಯಕ್ಷ ಶರಭು ಕಲ್ಯಾಣಿ ನೆಲೋಗಿ ಆಗ್ರಹಿಸಿದರು.

ಜೊತೆಗೆ ಎಂ ಎಸ್ ಪಿ ಬೆಂಬಲ ಕಾನೂನು ಜಾರಿಗೆ ತರಬೇಕು, ಕೆಎಂಎಫ್ ಮಾದರಿಯಾಗಿ ತೊಗರಿ ಖರೀದಿ ಕೇಂದ್ರಗಳನ್ನು ಪ್ರತಿ ಗ್ರಾಮಪಂಚಾಯಿತಿಗೆ ಒಂದರಂತೆ ತೆರೆಯಬೇಕು ಮತ್ತು ಕ್ಷೀರಭಾಗ್ಯ ಯೋಜನೆಯಂತೆ ಶಾಲಾ ಮಕ್ಕಳಿಗೆ ಹಾಲು ನೀಡುವಂತೆ.ಅಕ್ಷರ ದಾಸೋಹ ಯೋಜನೆಯಡಿ ಎಲ್ಲಾ ಶಾಲೆಗಳಿಗೆ ತೊಗರಿ ಬೇಳೆಯನ್ನು ಪೂರೈಸಬೇಕು ಎಂದರು.

ರೈತರು ಬೆಳೆದ ಪ್ರತಿಯೊಂದು ಬೆಳೆಗಳಿಗೆ ಡಾ : ಸ್ವಾ ಮಿನಾಥನ್ ಆಯೋಗದ ವರದಿಯಂತೆ ಸೂಕ್ತವಾದ ಬೆಂಬಲ ಬೆಲೆ ನಿಗದಿಪಡಿಸಿ ಅತಿವೃಷ್ಟಿ ಮತ್ತು ಬೀಕರ ಪ್ರವಾಹದಿಂದಾಗಿ ಬೆಳೆಗಳು ಸಂಪೂರ್ಣವಾಗಿ ನಾಶವಾಗಿ ರೈತರು ಕಂಗಾಲಾಗಿ ಹೋಗಿದ್ದಾರೆ.ಸಾಲ ಶೋಲ ಮಾಡಿ ರಸಗೊಬ್ಬರ, ಬಿತ್ತನೆ ಬೀಜ ಕೀಟನಾಶಕ, ಮುಂತಾದ ಕೃಷಿಚಟುವಟಿಕೆಗಳಿಗಾಗಿ ಹಣವನ್ನು ನೀಡಿ ತೀವ್ರವಾದ ಸಂಕಷ್ಟಕ್ಕೆ ಒಳಗಾಗಿದ್ದು ಆದ್ದರಿಂದ ಕೂಡಲೇ ಕೇಂದ್ರ ಮತ್ತು ರಾಜ್ಯ ಸರಕಾರವು ಎಚ್ಚೆತ್ತುಕೊಂಡು ಸಂಕಷ್ಟದಲ್ಲಿರುವ ರೈತರ ಬೆನ್ನೆಲುಬಾಗಿ ನಿಲ್ಲಬೇಕು ಎಂದು ಒತ್ತಾಯಿಸಿದರು

ನಂತರವಾಗಿ ಮಾತನಾಡಿದ ಅವರು ರೈತರು ಮಾಡಿ ರುವ ಎಲ್ಲಾ ರಾಷ್ಟ್ರೀಕೃತ ಬ್ಯಾಂಕಿನಲ್ಲಿರುವ ಸಾಲವನ್ನು 5 ಲಕ್ಷ ರೂ. ವರೆಗೆ ಮನ್ನಾ ಮಾಡಬೇಕು. ಹಾಗೇ ಈ ವರ್ಷ ಕೃಷಿ ಕೂಲಿಕಾರ್ಮಿಕರಿಗೆ ಹೊಲ ಗದ್ದೆಗಳಲ್ಲಿ ಕಡಿಮೆ ಪ್ರಮಾಣದ ಕೆಲಸ ಸಿಗುವುದರಿಂದ ವಲಸೆ ತಪ್ಪಿಸಲು ತಕ್ಷ ಣವೇ ಉದ್ಯೋಗ ಖಾತ್ರಿ ಯೋಜನೆಯನ್ನು ಸಮರ್ಪಕವಾಗಿ ಜಾರಿಗೆ ತಂದು ಕೆಲಸ ನೀಡಬೇಕು ಮತ್ತು ವೇತನ ಹೆಚ್ಚಿಸಬೇಕು.ಮತ್ತು ನಿರಂತರವಾಗಿ 10-00 ಗಂಟೆ ವಿದ್ಯುತ್ ನೀಡಬೇಕು, ರೈತರಿಗೆ ನಮ್ಮ ಹೊಲ ನಮ್ಮ ದಾರಿ ಯೋಜನೆಯ ಮುಖಾಂತರವಾಗಿ ಹದಗೆಟ್ಟಿರುವ ರಸ್ತೆಗಳ ನಿರ್ಮಾಣ ಮಾಡಬೇಕು ಎಂದು ಒತ್ತಾಯಿಸಿದರು.

# ಚೆಕ್ ಡ್ಯಾಂ: ರೂ. 100 ಕೋಟಿ ವೆಚ್ಚದ ಪೈಲಟ್ ಯೋಜನೆಗೆ ರೂಪುರೇಷೆ ಸಿದ್ಧ:ಎಂ. ಬಿ. ಪಾಟೀಲ

**ವಿಜಯಪುರ, ಡಿ. 22:** ಹಳ್ಳಗಳಲ್ಲಿ ಹೂಳು ತೆಗೆದು ಮಳೆಗಾಲದಲ್ಲಿ ನೀರು ಸಂಗ್ರಹಿಸಿ ಬೇಸಿಗೆಯಲ್ಲಿ ಸದ್ಬಳಕೆ ಮಾಡಲು ಚೆಕ್ ಡ್ಯಾಂ ನಿರ್ಮಿಸುವ ರೂ. 100 ಕೋಟಿ ವೆಚ್ಚದ ಪೈಲಟ್ ಯೋಜನೆಗೆ ರೂಪುರೇಷೆ ಸಿದ್ಧಪಡಿಸಲಾಗಿದೆ ಎಂದು ಎಂದು ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಹೇಳಿದ್ದಾರೆ. ರವಿವಾರ ತಿಕೋಟಾದ ಹಳಚಾಪುರ ರಸ್ತೆಯ ಸಾತಲಿಂಗಯ್ಯ ಸಾಲಿಮಠ ಅವರ ತೋಟದಲ್ಲಿ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ತಿಕೋಟಾ ತಾಲೂಕು ಘಟಕದಿಂದ ಆಯೋಜಿಸಿದ ರೈತ ಕ್ಷೇತ್ರೋತ್ಸವ ಮತ್ತು ಜಿಲ್ಲೆಯ ಸಮಸ್ತ ಕಬ್ಬು ಬೆಳೆಗಾರರಿಗೆ ವಿಶೇಷ ತಜ್ಞರಿಂದ ಚಿಂತನಗೋಷ್ಠಿ, ಕೃಷಿಗೆ ಸಂಬಂಧಿಸಿದಂತೆ ಉಪನ್ಯಾಸ ಮತ್ತು ಕೃಷಿ ಉತ್ಪನ್ನಗಳಿಂದ ತುಲಾಭಾರ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಬಬಲೇಶ್ವರ ಮತ್ತು ತಿಕೋಟಾ ತಾಲೂಕುಗಳಲ್ಲಿ 67 ಹಳ್ಳಗಳಿಗೆ 206 ಚೆಕ್ ಡ್ಯಾಂ ನಿರ್ಮಿಸಲಾಗುವುದು. ಇದರಿಂದ ಅಂತರ್ಜಲವೂ ಹೆಚ್ಚಾಗಲಿದೆ ಎಂದು ಅವರು ತಿಳಿಸಿದರು.

ಕಬ್ಬು ಮತ್ತು ಸಕ್ಕರೆ ಬೆಲೆ ನಿರ್ಧಾರ,

ಎಥೆನಾಲ್ ಖರೀದಿ ಹಾಗೂ ಬೆಂಬಲ ಬೆಲೆ ನಿಗದಿ ವಿಷಯಗಳೂ ಕೂಡ ಕೇಂದ್ರ ಸರಕಾರ ವ್ಯಾಪ್ತಿಯಲ್ಲಿ ನಿರ್ಧಾರವಾಗುತ್ತವೆ. ಆದರೂ ರಾಜ್ಯ ಸರಕಾರ ರೈತರ ಹಿತ ಕಾಪಾಡಲು ಬದ್ಧವಾಗಿದೆ. ತಿಕೋಟಾ- ಹಳಚಾಪುರ ರಸ್ತೆಯನ್ನು ರೂ. 3.50 ಕೋ. ವೆಚ್ಚದಲ್ಲಿ ಅಭಿವೃದ್ಧಿ ಪಡಿಸಲಾಗುವುದು. ರೂ. 350 ಕೋ. ವೆಚ್ಚದಲ್ಲಿ 750 ಕಿ. ಮೀ. ಹೊಲಗಾಲುವೆ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುತ್ತಿದೆ. ರೈತರು ಹಂತಹಂತವಾಗಿ ಸಾವಯವ ಕೃಷಿ ಅಳವಡಿಸಿಕೊಳ್ಳಬಹುದು. ಹನಿ ನೀರಾವರಿ ಮೂಲಕ ಕಬ್ಬು ಬೆಳೆದರೆ ನೀರು ಉಳಿತಾಯ, ಇಳುವರಿ ಹೆಚ್ಚಳ, ಕೃಷಿ ಭೂಮಿಯ ಗುಣಮಟ್ಟ ಉಳಿಸಿಕೊಳ್ಳಲು ಸಾಧ್ಯ. ರೈತರಿಗೆ ಹನಿ ನೀರಾವರಿ ಸಲಕರಣೆ ಒದಗಿಸಲು ಸಕ್ಕರೆ ಕಾರ್ಖಾನೆಗಳ ಜೊತೆಗೆ ಒಡಂಬಡಿಕೆ ಮಾಡಿಕೊಳ್ಳಲು ರೂಪುರೇಷೆ ಸಿದ್ಧಪಡಿಸಲಾಗುವುದು. ಬಾಬಾನಗರ ಬಳಿ ರೂ. 567 ಕೋ. ವೆಚ್ಚದಲ್ಲಿ ಬೃಹತ್ ಜಲಸಂಗ್ರಹಾಲಯ ನಿರ್ಮಿಸಲಾಗುತ್ತಿದೆ. ರೈತರ ಬಾಳು ಹಸನಾಗಿಸಲು ಸಕಲ ಯೋಜನೆಗಳನ್ನು ಕೈಗೊಳ್ಳಲಾಗುವುದು ಎಂದು ಅವರು ಹೇಳಿದರು.

ಬಂಗಾರಕ್ಕಿಂತ ಕೃಷಿ ಉತ್ಪನ್ನಗಳಿಂದ ತುಲಾಭಾರ ಮಾಡಿರುವುದು ಅತೀವ ಸಂತಸ ತಂದಿದೆ ಎಂದು ಸಚಿವರು ಇದೇ ವೇಳೆ ತಿಳಿಸಿದರು.

ರೈತ ಸಂಘ ಮತ್ತು ಹಸಿರು ಸೇನೆ ರಾಜ್ಯಾಧ್ಯಕ್ಷ ಚುನ್ನಪ್ಪ ಪೂಜೇರಿ ಮಾತನಾಡಿ, ಕುಡಿಯುವ ನೀರಿಗೂ ಪರದಾಡುತ್ತಿದ್ದ ವಿಜಯಪುರ ಜಿಲ್ಲೆಯಲ್ಲಿ ಈಗ ನೀರಾವರಿ ಮಾಡಿದ್ದಾರೆ. ರೈತರ ಬದುಕು ಹಸನಾಗಿಸಿದ್ದಾರೆ. ರಾಜ್ಯದಿಂದ ಸಂಗ್ರಹವಾಗುವ ತೆರಿಗೆಗೆ ತಕ್ಕಷ್ಟು ಕೇಂದ್ರ ಸರಕಾರ ಪರಿಹಾರ ನೀಡುತ್ತಿಲ್ಲ. ಸಚಿವರು ರೈತಪರ ಚಿಂತಕರಾಗಿದ್ದಾರೆ ಎಂದು ಹೇಳಿದರು.

ಸಂಘದ ತಾಲೂಕು ಘಟಕದ ಅಧ್ಯಕ್ಷ ಸಾತಲಿಂಗಯ್ಯ ಸಾಲಿಮಠ ಮಾತನಾಡಿ, ಹುಲ್ಲು ಕಡ್ಡಿ ಬೆಳೆಯದ ಈ ಭಾಗದಲ್ಲಿ ಈಗ ಕೊಳವೆ ಭಾವಿಗಳಲ್ಲಿ ನೀರು ಬಂದಿದೆ. ಕುಡಿಯುವ ನೀರಿಗಾಗಿ ಪರದಾಡುತ್ತಿದ್ದ ನಾವು ಇಂದು ಹೊಲದಲ್ಲಿ ಕಬ್ಬು ಬೆಳೆಯುತ್ತಿದ್ದೇವೆ. ನಮ್ಮ ಭಾಗದ ರೈತರ ಬಾಳು ಹಸನು ಮಾಡಿದ್ದಾರೆ. ಸಾಲ ಮಾಡುತ್ತಿದ್ದ ನಾವು ಬಂಗಾರದಂಥ ಬೆಳೆ ಬೆಳೆಯುತ್ತಿದ್ದೇವೆ. ಈ ಹಿನ್ನೆಲೆಯಲ್ಲಿ ಸಚಿವ ಎಂ. ಬಿ. ಪಾಟೀಲ ಅವರನ್ನು ಕೃಷಿ ಉತ್ಪನ್ನಗಳಿಂದ ತುಲಾಭಾರ ಮಾಡುವ ಕಾರ್ಯಕ್ರಮ ಆಯೋಜಿಸಿದ್ದೇವೆ ಎಂದು ಹೇಳಿದರು.

ಸಂಘದ ರಾಜ್ಯ ಗೌರವಾಧ್ಯಕ್ಷ ಶಶಿಕಾಂತ ಗುರೂಜಿ ಮಾತನಾಡಿ, ಸಚಿವ ಎಂ. ಬಿ. ಪಾಟೀಲರು ರಾಜಕೀಯದ ಜೊತೆಗೆ ಆಧ್ಯಾತ್ಮಿಕ ತತ್ವಗಳನ್ನು ಅಳವಡಿಸಿಕೊಂಡಿರುವ ಜಲನಾಯಕರಾಗಿದ್ದಾರೆ. ಶ್ರೀ ಸಿದ್ಧೇಶ್ವರ ಸ್ವಾಮೀಜಿ ಆಶೀರ್ವಾದ ಅವರ ಮೇಲಿದೆ. ಸಚಿವರ ವಿಚಾರಧಾರೆಗಳು ಇತರ ರಾಜಕಾರಣಿಗಳಿಗೆ ಮಾದರಿಯಾಗಿವೆ ಎಂದು ಹೇಳಿದರು.

ಗುಣದಾಳ ಕಲ್ಯಾಣ ಹಿರೇಮಠದ ಡಾ. ವಿವೇಕಾನಂದ ದೇವರು ಮಾತನಾಡಿ, ರೈತರು ಕೃಷಿಯೋಗಿಯಾಗಿದ್ದಾರೆ. ಇಂಥ ರೈತರಿಗೆ ನೀರು ಕೊಟ್ಟಿರುವ ಸಚಿವ ಎಂ. ಬಿ. ಪಾಟೀಲರಿಗೆ ಎಲ್ಲರ ಆಶೀರ್ವಾದ ಇರಲಿದೆ ಎಂದು ಹೇಳಿದರು.

ಶಿರಶ್ಯಾಡ ಹಿರೇಮಠದ ಶ್ರೀ ಅಭಿನವ ಮುರುಗೇಂದ್ರ ಶಿವಾಚಾರ್ಯರು ಮಾತನಾಡಿ, ಎಂ. ಬಿ. ಪಾಟೀಲರು ಆತ್ಮಬಲದಿಂದ ಈ ಭಾಗ ಹಸಿರಾಗಲು ನೀರಾವರಿ ಮೂಲಕ ಉಸಿರು ನೀಡಿದ್ದಾರೆ. ಸರ್ವರನ್ನು ಜೋಡಿಸುವ ಕೆಲಸ ಮಾಡುತ್ತಿದ್ದಾರೆ. ಜನಮಾನಸದಲ್ಲಿ ಅಚ್ಚಳಿಯದೇ ಉಳಿಯುವ ವ್ಯಕ್ತಿ ಮತ್ತು ಶಕ್ತಿಯಾಗಿದ್ದಾರೆ ಎಂದು ಹೇಳಿದರು.

ತಿಕೋಟಾ ಹಿರೇಮಠದ ಶಿವಬಸವ ಶಿವಾಚಾರ್ಯರು ಮಾತನಾಡಿದರು.

ಈ ಕಾರ್ಯಕ್ರಮದಲ್ಲಿ ರೈತರು ಸಚಿವರನ್ನು ಅಡಕೆ, ಪಪ್ಪಾಯಿ, ಕಬ್ಬು, ಸೀತಾಫಲ, ಪೇರು, ದ್ರಾಕ್ಷಿ, ಮಣೂಕು, ಅಂಜೂರು ಹಾಗೂ ನೆಲ್ಲಿಕಾಯಿ ಕೃಷಿ ಉತ್ಪನ್ನಗಳಿಂದ ತುಲಾಭಾರ ಮಾಡಿದರು.

ಈ ಸಂದರ್ಭದಲ್ಲಿ ತಿಕೋಟಾ ಹಿರೇಮಠದ ಶ್ರೀ ಶಿವಬಸವ ಶಿವಾಚಾರ್ಯರು, ಶಿರಶ್ಯಾಡ ಹಿರೇಮಠದ ಶ್ರೀ ಅಭಿನವ ಮುರುಗೇಂದ್ರ ಶಿವಾಚಾರ್ಯರು, ಸಂಘದ ಜಿಲ್ಲಾಧ್ಯಕ್ಷ ಸಂಗಮೇಶ ಸಗರ, ಮುಖಂಡರಾದ ಸಿದ್ದು ಗೌಡನವರ, ಸೋಮನಾಥ ಬಾಗಲಕೋಟ, ಭೀಮರಾವ ಹಂಗರಗಿ, ಮಲ್ಲಿಕಾರ್ಜುನ ಹಂಜಗಿ, ಬಸಯ್ಯ ವಿಭೂತಿ, ಜಗದೀಶಗೌಡ ಪಾಟೀಲ, ವಿಜಯಕುಮಾರ ಪಾಟೀಲ, ಪ್ರತಿಭಾ ಜಗದೀಶಗೌಡ ಪಾಟೀಲ, ಶೋಭಾ ಹಲ್ಯಾಳ, ಲೇಪು ಕೊಣ್ಣೂರ, ಭಾಗೀರಥಿ



ತೇಲಿ, ಸಿದಗೊಂಡ ರುದ್ರಗೌಡ, ನಾರಾಯಣ ಪರಮಾಜಿ, ಕಲ್ಲು ಸೊನ್ನದ, ರಾಹುಲ್ ಕುಬಕಡ್ಡಿ, ಗಿರೀಶ ಕುಲಕರ್ಣಿ, ಸಿದ್ರಾಮ ಪೂಜಾರಿ, ಸಿದ್ದಪ್ಪ ಭೊಸಗೊಂಡ, ರಾಮು ಮಾಳಿ, ಸಾಹೇಬಗೌಡ ಕೆಂಪವಾಡ, ಮಾನಿಂಗಪ್ಪ ಮಂಟೂರ, ಮಮ್ಮುಲಾಲ ಮುಜಾವರ, ಸದಾಶಿವಯ್ಯ ಅರಕೇರಿಮಠ,ಬಸವ ಟ್ರಾಯ್ ಶಿವಶಂಕ್ರಯ್ಯ ಮಠ, ಅಧಿಕಾರಿಗಳಾದ ಶಿವನಗೌಡ ಪಾಟೀಲ, ಸುರೇಶ ಚವಲರ, ಬಸವಂತರಾಯಗೌಡ ಬಿರಾದಾರ, ದೇವರಾಜ ಉಳ್ಳಾಗಡ್ಡಿ, ಮಂಜುನಾಥ ಜಾನಮಟ್ಟಿ, ಜಿ. ಎಸ್. ದೇಶಮುಖ, ಬಸನಗೌಡ ಪಾಟೀಲ, ಅಂಬಣ್ಣ ಹರಳಯ್ಯ, ಮಲ್ಲು ರಾಣಗಟ್ಟಿ, ರಘು ನಡುವಿನಮನಿ, ಗಿರಿಮಲ್ಲಯ್ಯ ಮಠಪತಿ, ಗಾಯತ್ರಿ ಹಟ್ಟಿಮಠ, ಶಿವಲೀಲಾ ಸಾಲಿಮಠ ಮುಂತಾದವರು ಉಪಸ್ಥಿತರಿದ್ದರು.

# ಪೋಲಿಯೋ ಮುಕ್ತ ದೇಶದ ಕನಸು ನನಸಾಗಿಸಲು ಐದು ವರ್ಷದೊಳಗಿನ ಮಕ್ಕಳಿಗೆ ಲಸಿಕೆ ಹಾಕಿಸಿ: ಎನ್ ಎಸ್ ಬೋಸರಾಜು ಸಲಹೆ





ಧೈರ್ಯದ ದಾರಿ

**ರಾಯಚೂರು ಡಿ.22:** ಪೋಲಿಯೋ ವೈರಸ್‌ನಿಂದ ಜೀವನ ಪರ್ಯಂತ ಅಂಗವಿಕಲತೆ ಉಂಟು ಮಾಡುವುದನ್ನು ತಡೆಯಲು ಹುಟ್ಟಿನಿಂದ ಐದು ವರ್ಷದೊಳಗಿನ ಮಕ್ಕಳಿಗೆ ಈ ಹಿಂದೆ ಎಷ್ಟೇ ಬಾರಿ ಹಾಕಿಸಿದ್ದರೂ ಸಹ ಮತ್ತೆ ಈಗಲೂ ಎರಡು ಹನಿ ಪೋಲಿಯೊ ಲಸಿಕೆ ಹಾಕಿಸಿ ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಹಾಗೂ ಕರ್ನಾಟಕ ವಿಧಾನ ಪರಿಷತ್ತು ಸಭಾ ನಾಯಕರಾದ ಎನ್.ಎಸ್. ಬೋಸರಾಜು ಅವರು ಸಲಹೆ ಮಾಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಹಾನಗರ ಪಾಲಿಕೆ, ರಿಮ್ಸ್ ಆಸ್ಪತ್ರೆ, ನವೋದಯ ವೈದ್ಯಕೀಯ ಕಾಲೇಜು, ರೋಟರಿ, ಲಯನ್ಸ್ ಕ್ಲಬ್, ರೆಡ್‌ಕ್ರಾಸ್, ಶಿಕ್ಷಣ ಇಲಾಖೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಸಹಯೋಗದಲ್ಲಿ ನಗರದ ಕೆ.ಇ.ಬಿ ಕಾಲೋನಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ ಡಿಸೆಂಬರ್ 21ರಂದು ಹಮ್ಮಿಕೊಂಡಿದ್ದ ಪಲ್ಸ್ ಪೋಲಿಯೊ ಲಸಿಕಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, 1994 ರಿಂದ ಅಭಿಯಾನದ ರೂಪದಲ್ಲಿ ಲಸಿಕೆ ಹಾಕುವ ಕಾರ್ಯವನ್ನು ಕೈಗೊಂಡು ನಮ್ಮ ದೇಶದಲ್ಲಿ ಕಳೆದ 14 ವರ್ಷಗಳಿಂದ ಯಾವುದೇ ಪ್ರಕರಣ ವರದಿಯಾಗದಂತೆ ಸರಕಾರವು ಲಸಿಕೆ ಹಾಕುವ ಕಾರ್ಯ ಮಾಡುತ್ತಿದ್ದು, ಪ್ರಸ್ತುತ ಜಿಲ್ಲೆಯಲ್ಲಿ 2,59,984 ಮಕ್ಕಳಿಗೆ 1,133 ಮನೆ ಬೇಟಿ ತಂಡಗಳು, 33 ಮೊಬೈಲ್ ತಂಡ, 53 ಟ್ರಾನ್ಸಿಟ್ ತಂಡಗಳ ಮೂಲಕ 248 ಮೇಲ್ವಿಚಾರಣೆಯೊಂದಿಗೆ ಲಸಿಕೆ ಹಾಕಲಾಗುತ್ತಿದೆ ಎಂದು ತಿಳಿಸಿದರು.

ರಾಯಚೂರು ಲೋಕಸಭಾ ಕ್ಷೇತ್ರದ ಸಂಸದರಾದ ಜಿ ಕುಮಾರ್ ನಾಯಕ ಅವರು ಮಾತನಾಡಿ, ಇತ್ತೀಚಿನ ವರ್ಷಗಳಲ್ಲಿ ಲಸಿಕೆಗಳಿಂದಾಗಿ, ಮಕ್ಕಳಿಗೆ ಬಾಲ್ಯದಲ್ಲಿ ಕಾಡುವ ರೋಗಗಳನ್ನು ಪರಿಣಾಮಕಾರಿಯಾಗಿ ತಡೆಯುವ ಕಾರ್ಯವನ್ನು ರಾಜ್ಯ ಸರಕಾರ ಮಾಡುತ್ತಿದ್ದು, ಜನತೆ ಲಸಿಕೆಗಳ ಬಗ್ಗೆ ಯಾವುದೇ ಸಂಶಯ ವ್ಯಕ್ತಪಡಿಸದೇ ಮಕ್ಕಳ ಭವಿಷ್ಯದ ದೃಷ್ಟಿಯಿಂದ ಎಲ್ಲ ಲಸಿಕೆಗಳನ್ನು ಹಾಕಿಸಿ ರಾಯಚೂರು ಜಿಲ್ಲೆಯು ಈ ದಿಸೆಯಲ್ಲಿ ಮುಂಚೂಣಿಯಲ್ಲಿರಲು ಪ್ರತಿಯೊಬ್ಬರೂ ಸಹಕರಿಸಿ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ನಿತೀಶ್ ಕೆ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದು, ಮಹಾನಗರ ಪಾಲಿಕೆ ಆಯುಕ್ತರಾದ ಜುಬಿನ್ ಮೊಹಪಾತ್ರ, ಆರ್‌ಸಿಹೆಚ್ ಹಾಗೂ ಜಿಲ್ಲಾ ನೋಡಲ್ ಅಧಿಕಾರಿ ಡಾ.ವಿಜಯೇಂದ್ರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಸುರೇಂದ್ರಬಾಬು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ನಂದಿತಾ ಎಮ್.ಎನ್., ಸರ್ವೇಕ್ಷಣಾಧಿಕಾರಿ ಡಾ ಗಣೇಶ್ ಕೆ, ರೋಟರಿ ಸಂಸ್ಥೆಯ ತ್ರಿವಿಕ್ರಮ ಜೋಷಿ, ಮುಖಂಡರಾದ ಜಯಣ್ಣ, ಜಯವಂತರಾವ್ ಪತಂಗೆ, ಜಿಲ್ಲಾ ತಾಲೂಕಾ ಆರೋಗ್ಯಾಧಿಕಾರಿ ಡಾ.ಪ್ರಜ್ವಲ್ ಕುಮಾರ್, ಕ್ಷೇತ್ರ ಶಿಕ್ಷಣಾಧಿಕಾರಿ, ಡಾ.ಈರಣ್ಣ ಕೋಸಗಿ, ಶಿಶು ಅಭಿವೃದ್ಧಿ ಯೋಜನಧಿಕಾರಿ ಮಂಜುನಾಥ, ಮನ್ಸೂರ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ, ಈಶ್ವರ ಹೆಚ್ ದಾಸಪ್ಪನವರ, ರೇಡ್‌ಕ್ರಾಸ್ ಸಂಚಾಲಕರಾದ ಡಾ.ದಂಡಪ್ಪ ಬಿರಾದಾರ, ಮಾನವ ಹಕ್ಕುಗಳ ಸಂಘಟನೆಯ ಚಂದ್ರಶೇಖರ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಸಯ್ಯ, ರಾಜಶೇಖರ ಪಾಟೀಲ್, ಹೀರಾಲಾಲ್ ಮುಖ್ಯ ಗುರುಗಳು, ಡಿಪಿಎಮ್ ನವೀನ್, ಐಎಫ್‌ವಿ ಕೋಪ್ರೇಶ್, ಗುರು ಗಂಪಾ ಸೇರಿದಂತೆ ಆರೋಗ್ಯ ಇಲಾಖೆ, ಶಿಕ್ಷಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಇಲಾಖೆ, ರೋಟರಿ, ಲಯನ್ಸ್, ಸೇರಿದಂತೆ ಸಂಘ- ಸಂಸ್ಥೆಗಳ ಪದಾಧಿಕಾರಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

# ಪಲ್ಸ್ ಪೋಲಿಯೊ, ಕಾರ್ಯಕ್ರಮದಲ್ಲಿ ಪಾಲ್ಗೊಂಡ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್



**ಹೊಸಪೇಟೆ ಡಿ 22:** ವಿಜಯನಗರ ಸಾಮ್ರಾಜ್ಯ ಒಂದು ಕಾಲಕ್ಕೆ ಇಡೀ ಜಗತ್ತನ್ನೇ ಸೆಳೆಯುವ ರೀತಿಯಲ್ಲಿ ಸಂಪದ್ಭರಿತವಾಗಿತ್ತು, ಅದರ ಪ್ರೇರಣೆಯಲ್ಲೇ ದೇಶ ಇಂದು ಅಭಿವೃದ್ಧಿಯತ್ತ ದಾಪುಗಾಲು ಇಡುತ್ತಿದೆ ಎಂದು ಕೇಂದ್ರದ ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರ ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದರು.

ಕಮಲಾಪುರದ ಹಂಪಿ ವಿಶ್ವಪಾರಂಪರಿಕ ತಾಣ ನಿರ್ವಹಣಾ ಪ್ರಾಧಿಕಾರದ (ಹವಾಮ) ಆವರಣದಲ್ಲಿ ಭಾನುವಾರ ಗಿಡ ನೆಟ್ಟು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಮಕ್ಕಳಿಗೆ ಪೋಲಿಯೊ ಲಸಿಕೆ ಹಾಕಿದ ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ 2047ರ ವೇಳೆಗೆ ದೇಶವು ಜಗತ್ತಿನಲ್ಲೇ ಸಂಪದ್ಭರಿತ ಮತ್ತು ಮುಂದುವರಿದ ದೇಶವಾಗಿ ಹೊರಹೊಮ್ಮುವ ನಿಟ್ಟಿನಲ್ಲಿ ಶ್ರಮಿಸುತ್ತಿದೆ, ಅದಕ್ಕೆ ಪ್ರೇರಣೆ ವಿಜಯನಗರ ಎಂಬುದರಲ್ಲಿ ಎರಡು ಮಾತಿಲ್ಲ ಎಂದರು.

ಎಲ್ಲರ ಅಭಿವೃದ್ಧಿ ವಿಜಯನಗರ ಕಾಲದ ರಾಜರ ಗುರಿಯಾಗಿತ್ತು. ಸಾಮ್ರಾಜ್ಯ ಸಂಪದ್ಭರಿತವಾಗಿದ್ದರೆ ಜನರೂ ಖುಷಿಯಿಂದ ಇರುತ್ತಾರೆ ಎಂಬುದು ವಿಜಯನಗರ ಅರಸರ ಕಾಳಜಿಯಾಗಿತ್ತು. ಇದೇ ಹಾದಿಯನ್ನು ಪ್ರಧಾನಿ ಮೋದಿ ಅವರೂ ತುಳಿದಿದ್ದಾರೆ. ಇದಕ್ಕಾಗಿ ಹಲವಾರು ಯೋಜನೆಗಳನ್ನು ಜಾರಿಗೆ ತಂದಿದ್ದಾರೆ ಮತ್ತು ಅದನ್ನು ಸಮರ್ಪಕವಾಗಿ ಅನುಷ್ಠಾನಕ್ಕೆ ತರಲು ಶ್ರಮಿಸುತ್ತಿದ್ದಾರೆ. ಸಂಪದ್ಭರಿತ ದೇಶವನ್ನಾಗಿ ರೂಪಿಸಿ ಜನರು ಖುಷಿಯಿಂದ, ನೆಮ್ಮದಿಯಿಂದ ಬದುಕುವಂತೆ ಮಾಡುವ ಸಲುವಾಗಿಯೇ ಈ ಎಲ್ಲ ಕೆಲಸಗಳು ನಡೆಯುತ್ತಿವೆ' ಎಂದು ಸಚಿವೆ ನಿರ್ಮಲಾ ಹೇಳಿದರು.'ಬಜೆಟ್ ಕುರಿತಂತೆ ಹಾಗೂ ದೇಶದ ಆರ್ಥಿಕ ಸ್ಥಿತಿಗತಿ ಕುರಿತಂತೆ ಎರಡು ವರ್ಷಗಳಿಗೆ ಒಮ್ಮೆ ಚಿಂತನ ಶಿಬಿರ ನಡೆಯುತ್ತದೆ, ಈ ಬಾರಿ ಅದನ್ನು ಹಂಪಿಯಲ್ಲಿ ನಡೆಸಿರುವುದಕ್ಕೆ ನಮಗೆ ಬಹಳ ಖುಷಿಯಾಗಿದೆ. ನನ್ನ ಜತೆಗೆ ಇಲಾಖೆಯ 120ಕ್ಕೂ ಅಧಿಕ ಅಧಿಕಾರಿಗಳು ಬಂದಿದ್ದಾರೆ. ಕಾರ್ಪೊರೇಟ್ ವ್ಯವಹಾರ ಖಾತೆ ರಾಜ್ಯ ಸಚಿವ ಹರ್ಷ ಮಲ್ಹೋತ್ರಾ ಸಹಿತ ಇಲ್ಲಿದ್ದಾರೆ. ಎಲ್ಲರೂ ವಿಶ್ವ ಪಾರಂಪರಿಕ ತಾಣ ಹಂಪಿಯನ್ನು ನೋಡಿ ಬಹಳ ಪ್ರೇರಿತರಾಗಿದ್ದಾರೆ' ಎಂದರು.'ನೀವು ಚಿಂತನ ಶಿಬಿರದಲ್ಲಿ ಪಾಲ್ಗೊಂಡರಷ್ಟೇ ಸಾಲದು, ಇಲ್ಲಿ ನಿಮ್ಮ ಹೆಜ್ಜೆಗುರುತನ್ನು ಬಲವಾಗಿ ಊರಬೇಕು ಎಂದು ನಾನು ಅಧಿಕಾರಿಗಳಿಗೆ ಹೇಳಿದೆ, ಅದೇ ಕಾರಣಕ್ಕೆ ಅವರೆಲ್ಲರೂ ಇಲ್ಲಿಗೆ ಗಿಡ ನೆಡುವ ಕಾರ್ಯಕ್ರಮಕ್ಕೆ ಬಂದಿದ್ದಾರೆ ಹಾಗೂ ಅವರೆಲ್ಲರೂ ತಮ್ಮ ಹೆಸರಲ್ಲಿ ಒಂದೊಂದು ಗಿಡವನ್ನು ಇಲ್ಲಿ ನೆಟ್ಟಿದ್ದಾರೆ. ದೇಶದ ಭವಿಷ್ಯ ಇರುವುದು ಹಸಿರಿನಲ್ಲಿ, ಹಸಿರನ್ನು ಉಳಿಸುವ ಕೆಲಸ ಆಗಬೇಕು ಎಂಬ ಸಂದೇಶ ಈ ವಿಶ್ವಪಾರಂಪರಿಕ ತಾಣದಿಂದ ರವಾನೆಯಾಗಬೇಕಾಗಿದೆ' ಎಂದು ಸಚಿವರು ಹೇಳಿದರು.

**ಪೋಲಿಯೊ ನಿರ್ಮೂಲನೆ ಅಗತ್ಯ:** ಆರೋಗ್ಯ ಇಲಾಖೆಯ ಜತೆಗೆ ಸಾರ್ವಜನಿಕರು ಸಹಕರಿಸಿದ್ದರಿಂದ ದೇಶದಿಂದ ಇಂದು ಪೋಲಿಯೊ ನಿರ್ಮೂಲನೆ ಆಗಿದೆ, ಅದು ಮತ್ತೆ ಬರಬಾರದು ಎಂಬ ಕಾರಣಕ್ಕೆ ಸಾರ್ವತ್ರಿಕ ಪಲ್ಸ್ ಪೋಲಿಯೊ ಅಭಿಯಾನ ನಡೆಯುತ್ತಿದೆ, ಈ ಅಭಿಯಾನದಲ್ಲಿ ತೊಡಗಿರುವ ವೈದ್ಯಕೀಯ, ಅರೆವೈದ್ಯಕೀಯ ಹಾಗೂ ಇತರ ಸಿಬ್ಬಂದಿಗೆ ನಾವೆಲ್ಲ ಸಹಕಾರ ನೀಡಬೇಕಾಗಿದೆ ಎಂದು ಸಚಿವೆ ನಿರ್ಮಲಾ ಹೇಳಿದರು.ಸಂಸದ ಇ.ತುಕಾರಾಂ, ಶಾಸಕರಾಧ ಎಚ್.ಆರ್.ಗವಿಯಪ್ಪ, ಡಾ.ಎನ್.ಟಿ. ಶ್ರೀನಿವಾಸ್, ಜಿಲ್ಲಾಧಿಕಾರಿ ಕವಿತಾ ಎಸ್.ಮನ್ನಿಕೇರಿ, ಎಸ್ಪಿ ಎಸ್.ಜಾಹ್ನವಿ, ಜಿಲ್ಲಾ ಪಂಚಾಯಿತಿ ಸಿಇಒ ಎಚ್.ಅನುಪಮಾ, ಜಿಲ್ಲಾ ಆರ್‌ಸಿಎಚ್ ಅಧಿಕಾರಿ ಡಾ.ಜಂಬಯ್ಯ ಇತರರು ಇದ್ದರು.

# ಪಲ್ಸ್ ಪೋಲಿಯೋ ಅಭಿಯಾನದಲ್ಲಿ ಸ್ಕೌಟ್ ಗೈಡ್ ವಿದ್ಯಾರ್ಥಿಗಳು ಭಾಗಿ



ಧೈರ್ಯದ ದಾರಿ

**ರಾಯಚೂರ,ಡಿ.22–** ರಾಯಚೂರು ಜಿಲ್ಲೆಯದ್ಯಾಂತ ನಡೆದ ಪಲ್ಸ್ ಪೋಲಿಯೋ ಅಭಿಯಾನದಲ್ಲಿ ಬಸ್ ನಿಲ್ದಾಣದಲ್ಲಿ, ರೈಲ್ವೆ ನಿಲ್ದಾಣದಲ್ಲಿ, ತರಕಾರಿ ಮಾರುಕಟ್ಟೆಗಳಲ್ಲಿ, ಅಂಗನವಾಡಿ ಶಾಲೆಗಳಲ್ಲಿ ನಡೆದ ಈ ಅಭಿಯಾನದಲ್ಲಿ ಶಿಕ್ಷಕರ ಜೊತೆ ಮಕ್ಕಳನ್ನು ಪಾಲಕರೊಂದಿಗೆ ಪಲ್ಸ್ ಪೋಲಿಯೋ ಹಾಕಿಸಲು ತರುವುದು ಕಂಡುಬಂದಿತ್ತು. ಸದಾ ಬಂದಿಲ್ಲೊಂದು ಸಮಾಜ ಹೋಗಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿರುವ ಸ್ಕೌಟ್ ಗೈಡ್ ಸಂಸ್ಥೆಯು ಸರಕಾರದ ವಿವಿಧ ಇಲಾಖೆಗಳ ಕಾರ್ಯಕ್ರಮಗಳಿಗೂ ಕೂಡ ಕೈಜೋಡಿಸುತ್ತಿರುವುದು ಹೆಮ್ಮೆಯ ವಿಷಯವಾಗಿದೆ. ಈ ಕುರಿತಂತೆ ಜಿಲ್ಲಾ ಮುಖ್ಯ ಆಯುಕ್ತ ಬಸವರಾಜ್ ರೆಡ್ಡಿ ಮಾತನಾಡಿ ಸರಕಾರದ ಕಾರ್ಯಕ್ರಮಗಳಿಗೆ ನಮ್ಮ ಕೈ ಜೋಡಿಸುತ್ತಿರುವುದು ಅತ್ಯಂತ ಹೆಮ್ಮೆಯ ವಿಷಯ. ಮುಂದಿನ ದಿನಗಳಲ್ಲಿಯೂ ಕೂಡ ಈ ರೀತಿ ಅನೇಕ ಕಾರ್ಯಕ್ರಮಗಳಲ್ಲಿ ತಮ್ಮ ಸಂಸ್ಥೆ ತಾಲೂಕ ಸಂಸ್ಥೆಗಳೊಂದಿಗೆ ಕೈಜೋಡಿಸಿ ಪಾಲ್ಗೊಳ್ಳುತ್ತದೆ ಎಂದು ನೋಡಿದರು. ಜಿಲ್ಲಾ ಸಂಘಟಕ್ಕೆ ಅಂಬಣ್ಣ ನಾಯಕರು ಮಾರ್ಗದರ್ಶನ ಮಾಡಿದರು. ಜಿಲ್ಲೆಯ ಅನೇಕ ದಳನಾಯಕ ನಾಯಕಿಯರು ಸ್ಕೌಟ್ ಗೈಡ್ಗಳೊಂದಿಗೆ ಇದರಲ್ಲಿ ಭಾಗವಹಿಸಿದ್ದರು. ಮಕ್ಕಳ ಈ ಸೇವೆಗೆ ಶಿಕ್ಷಣ ಇಲಾಖೆಯೂ ಮುಕ್ತ ಕಂಠ ದೊಂದಿಗೆ ಶ್ಲಾಘಿಸಿದೆ.

## ಜಿಲ್ಲೆಯ ಸ್ಕೌಟ್ ಗೇಟ್ ವಿದ್ಯಾರ್ಥಿಗಳಿಗೆ ರಾಜ್ಯಪಾಲರ ಪ್ರಶಸ್ತಿ ಪುರಸ್ಕಾರ ಪರೀಕ್ಷೆ

ಧೈರ್ಯದ ದಾರಿ

**ದೇವದುರ್ಗ,ಡಿ.22–** 2024 25 ನೇ ಸಾಲಿನ ರಾಜ್ಯಪಾಲರ ಪ್ರಶಸ್ತಿ ಪುರಸ್ಕಾರಕ್ಕಾಗಿ ದೇವದುರ್ಗದಲ್ಲಿ ರಾಜ್ಯ ಸಂಸ್ಥೆಯ ಆದೇಶದಂತೆ ಹಮ್ಮಿಕೊಳ್ಳಲಾಗಿತ್ತು. ಶಿಬಿರದ ನಾಯಕರಾಗಿ ಶಶಿಕಾಂತ್ ಅವರ ದೇಸಾಯಿ, ನಾಯಕಿಯಾಗಿ ರಜನಿಡಿಯವರು ವಹಿಸಿಕೊಂಡಿದ್ದರು. ಜಿಲ್ಲೆಯ ವಿವಿಧ ಶಾಲೆಯ ಸ್ಕೌಟ್ ಗೈಡ್ಗಳು ದಳನಾಯಕ ನಾಯಕಿಯರು ಇದರಲ್ಲಿ ಭಾಗವಹಿಸಿದ್ದರು. ಶಿಕ್ಷಣ ಇಲಾಖೆ ಅಧಿಕಾರಿಗಳು ಸಹ ವೇದಿಕೆಯ ಮೇಲೆ ಹಾಸಿನರಗಿದ್ದರು. ಈ ಒಂದು ಪರೀಕ್ಷೆಯಲ್ಲಿ ಮಕ್ಕಳು ತಮ್ಮ. ನೈಪುಣ್ಯೆಯನ್ನು ತೋರಿಸಿದರು. ಜಿಲ್ಲಾ ಮುಖ್ಯ ಆಯುಕ್ತ ಬಸವರಾಜ್ ಬೋ ರೆಡ್ಡಿ ಅವರು ಈ ಶಿಬಿರದ ಸಂಪೂರ್ಣ ಜವಾಬ್ದಾರಿಯನ್ನು



ಹೊತ್ತುಕೊಂಡಿದ್ದಾರೆ ಜಿಲ್ಲಾ ಸಂಘಟಿಕ ಅಂಬಣ್ಣ ನಾಯಕ ಅವರು ಶಿಬಿರವನ್ನು ಸಂಘಟಿಸಿದ್ದರು. ವಿವಿಧ ಶಾಲೆಗಳ ದಳ ನಾಯಕ ನಾಯಕಿಯರುಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಪಟ್ಟಣದ ಪತ್ರಿಕೆ ವಿತರಿಕರಿಗೆ ಲಾಯನ್ಸ ಕ್ಲಬ್ ಮಾನ್ವಿ ವತಿಯಿಂದ ಸ್ವೆಟರ್‌ಗಳ ವಿತರಣೆ – ಎಂ. ನಾಗರಾಜ.




ಧೈರ್ಯದ ದಾರಿ

**ಮಾನ್ವಿ,ಡಿ.22:** ಪಟ್ಟಣದ ಮಾನ್ವಿ ಬ್ಯಾಂಕ್ ಸಭಾಂಗಣದಲ್ಲಿ ಮಾನ್ವಿ ಲಯನ್ಸ್ ಕ್ಲಬ್ ವತಿಯಿಂದ ನಡೆದ ಕಾರ್ಯ ಕ್ರಮದಲ್ಲಿ ಪಟ್ಟಣದಲ್ಲಿ ವಿವಿಧ ದಿನ ಪತ್ರಿಕೆಗಳನ್ನು ವಿತರಿಸುವ ಪತ್ರಿಕ ವಿತರಕರಿಗೆ ಮಾನ್ವಿ ಲಯನ್ಸ್ ಕ್ಲಬ್‌ನ ಅಧ್ಯಕ್ಷರಾದ ಎಂ. ನಾಗರಾಜ ಸ್ವೆಟರ್‌ಗಳನ್ನು ವಿತರಿಸಿ ಮಾತನಾಡಿ ಪ್ರತಿ ದಿನ ಪತ್ರಿಕೆಗಳಲ್ಲಿ ಬರವ ಸುದ್ದಿಗ ಳನ್ನು ಹೊತ್ತ ದಿನ ಪತ್ರಿಕೆಗಳನ್ನು ಬೆಳಗಿನಜಾವವೇ ಮನೆ ಬಾಗಿಲಿಗೆ ತಲುಪಿಸುವ ಪತ್ರಿಕೆಗಳನ್ನು ಹಂಚುವ ಬಹುತೇಕ ಹುಡುಗರು ವಿದ್ಯಾರ್ಥಿಗಳಾಗಿದ್ದು ಅವರು ಪ್ರತಿದಿನ ಪತ್ರಿಕೆಗಳನ್ನು ಹಂಚುವ ಮೂಲಕ ಬರುವ ಸ್ವಲ್ಪ ಅದಾಯದಿಂದ ತಮ್ಮ ವಿದ್ಯಾಭ್ಯಾಸವನ್ನು ಪೂರ್ಣಗೊಳಿಸುತ್ತಿರುವುದು ಕಂಡುಬರುತ್ತದೆ ಡಾ. ಎ. ಪಿ. ಜೆ. ಅಬ್ದುಲ್ ಕಲಾಂ ರವರು ಕೂಡ ತಮ್ಮ ವಿದ್ಯಾರ್ಥಿ ಜೀವನದಲ್ಲಿ ಪತ್ರಿಕೆಗಳನ್ನು ಹಂಚುವ ಮೂಲಕ ವಿದ್ಯಾಭ್ಯಸವನ್ನು ಪೂರ್ಣಗೊಳಿಸಿ ದೇಶದ ಉನ್ನತ ಸ್ಥಾನವಾದ ರಾಷ್ಟ್ರಪತಿ ಹುದ್ದೆಯನ್ನು ಅಲಂಕಾರಿಸುವ ಮೂಲಕ ಇತರರಿಗೆ ಮಾದರಿಯಾಗಿದ್ದರು. ಇತ್ತಿಚಿನ ದಿನಗಳಲ್ಲಿ ತೀವ್ರವಾದ ಚಳಿ ಇಂದಾಗಿ ಪತ್ರಿಕ ವಿತರಕರ ಆರೋಗ್ಯದ ಮೇಲೆ ಪರಿಣಾಮವಾಗಬಾರದು ಎನಗ್ನುವ ಉದ್ದೇಶದಿಂದ ಮಾನ್ವಿ ಲಯನ್ಸ್ ಕ್ಲಬ್‌ನ ವತಿಯಿಂದ ಪತ್ರಿಕ ವಿತರಕರಿಗೆ ಸ್ವೆಟರ್‌ಗಳನ್ನು ವಿತರಣೆ ಮಾಡಲಾಗುತ್ತಿದೆ ಮುಂದಿನ ದಿನಗಳಲ್ಲಿ ನಮ್ಮ ಮಾನ್ವಿ ಲಯನ್ಸ್ ಕ್ಲಬ್‌ನ ವತಿಯಿಂದ ಪತ್ರಿಕ ವಿತರಕರಿಗೆ ಉಚಿತ ಆರೋಗ್ಯ ತಪಾಸಣೆ ಹಾಗೂ ಚಿಕಿತ್ಸೆ ಶಿಬಿರ, ವಿತರಕರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ, ಪತ್ರಿಕೆಗಳನ್ನು ಹಂಚುವ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣಕ್ಕೆ ಅಗತ್ಯ ಆರ್ಥಿಕ ನೆರವನ್ನು ನೀಡುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು ಕೇಲವೆ ದಿನಗಳಲ್ಲಿ ಪಟ್ಟಣದಲ್ಲಿ ಹುಬ್ಬಳಿ ಜೋಷಿ ಕಣ್ಣಿನ ಆಸ್ಪತ್ರೆ ಸಹಯೋಗದಲ್ಲಿ ಕಣ್ಣಿನ ಆಸ್ಪತ್ರೆಯನ್ನು ಪ್ರಾರಂಭಿಸಿ ತಾಲೂಕಿನ ಜನರಿಗೆ ಉತ್ತಮ ನೇತ್ರ ಚಿಕಿತ್ಸೆ ನೀಡುವ ಕಾರ್ಯವನ್ನು ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು.

ಪಟ್ಟಣದ 20ಕ್ಕೂ ಹೆಚ್ಚು ಪತ್ರಿಕೆ ವಿತರಕರಿಗೆ ಹಾಗೂ ರಾತ್ರಿ ವೇಳೆ ಕೇಲಸ ಮಾಡುವ 10ಕ್ಕೂ ಹೆಚ್ಚು ಕಾವಾಲುಗರರಿಗೆ ಸ್ವೇಟರ್‌ಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಡಾ. ರೋಹಿಣಿ ಮಾನ್ವಿಕರ್, ಡಾ. ಸುರೇಶ ಬಾಬು, ಶ್ರೀ ನಗರೇಶ್ವರ ಆರ್ಯ ವೈಶ್ಯ ಸಂಘದ ತಾ. ಅಧ್ಯಕ್ಷರಾದ ಆರ್. ಮುತ್ತುರಾಜ್ ಶೆಟ್ಟಿ, ವಿಪ್ರಸಮಾಜದ ತಾ.ಅಧ್ಯಕ್ಷರಾದ ಮುದ್ದುರಂಗ ರಾವ್ ಮುತಲಿಕ್ , ರಾಮಲಿಂಗಪ್ಪ ಲಯನ್ಸ ಕ್ಲಬ್‌ನ ಕಾರ್ಯದರ್ಶಿ ಶಾಂತಮೂರ್ತಿ, ಖಜಾಂಚಿ ಶ್ರೀರಾಮ ರಾಜು, ಸದಸ್ಯರಾದ ಈರಣ್ಣ ಮರ್ಲಟ್ಟಿ, ವೆಂಕಟೇಶ್ ಇಲ್ಲೂರ್, ಡಾ. ಬಸವರಾಜ್ ಸಜ್ಜನ್, ಬಸವರಾಜ್ ಕಿರ್ಡಿ,ಶಂಭುಲಿಂಗಯ್ಯಸ್ವಾಮಿ ಹಿರೇಮಠ,ತಾ.ಪತ್ರಿಕಾ ವಿತರಕರ ಸಂಘದ ಅಧ್ಯಕ್ಷರಾದ ಬಸವನಗೌಡ ಮೇಟಿಸೇರಿದಂತೆ ಇನ್ನಿತರರು ಇದ್ದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE